ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೭೬

# ಪಟ್ಟಿ – ೦೭

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಮಂಗಳವಾರ, ದಿನಾಂಕ : ೨೩ನೇ ಜುಲೈ, ೨೦೧೯

---

## ಸಮೂಹ – II

೧. ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

೩. ಸಣ್ಣ ನೀರಾವರಿ ಸಚಿವರು.

೪. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

೫. ವೈದ್ಯಕೀಯ ಶಿಕ್ಷಣ ಸಚಿವರು.

೬. ಉನ್ನತ ಶಿಕ್ಷಣ ಸಚಿವರು.

೭. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.

---

## ಬೀದರ್ ಜಿಲ್ಲೆಯ ಕಾರಂಜಾ ಜಲಾಶಯದ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೪೮೦ (೫೨೨) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಹಲವು ವರ್ಷಗಳಿಂದ ಕಾರಂಜಾ ಜಲಾಶಯಕ್ಕೆ ಹರಿದು ಬರುವ ನೀರಿನ ಪ್ರಮಾಣ ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ;

(ಆ) ತೆಲಂಗಾಣದ ಕೊತ್ತೂರ ಬಳಿ ಬ್ಯಾರೇಜಿನಲ್ಲಿ ನೀರು ಸಂಗ್ರಹಿಸು–ತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕೊತ್ತೂರ ಬ್ಯಾರೇಜಿನಲ್ಲಿ ನೀರು ಸಂಗ್ರಹಿಸದಂತೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ರಾಜ್ಯ ಸರ್ಕಾರಿ ಶಾಲೆಗಳ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೪೮೧ (೫೦೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ರಾಜ್ಯ ಸರ್ಕಾರಿ ಶಾಲೆಗಳ ಬಗ್ಗೆ ಹೆಚ್ಚಿನ ಒತ್ತು ಕೊಡುವ ರೀತಿಯಲ್ಲಿ ಶಿಕ್ಷಣ ಇಲಾಖೆಯಿಂದ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ಬೀದರ್ ಜಿಲ್ಲೆಯ ಹೊಸ ಗ್ರಾಮ ಪಂಚಾಯಿತಿಯ ಯೋಜನೆ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೪೮೨ (೫೨೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬-೧೭ನೇ ಸಾಲಿನ ಮುಂಗಾರು ಹಂಗಾಮಿಗೆ ಸಂಬಂಧಿಸಿದಂತೆ ಬೀದರ್ ಜಿಲ್ಲೆಯ ೧೦ ಹೊಸ ಗ್ರಾಮ ಪಂಚಾಯಿತಿ ವ್ಯಾಪ್ತಿಯ ರೈತರಿಗೆ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿ ಬೆಳೆ ಪರಿಹಾರ ಸಿಗದೇ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ಬೀದರ್ ಸಹಕಾರಿ ಇಂಜಿನಿಯರ್ ಕಾಲೇಜಿನ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೪೮೩ (೫೭೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್‌ಗೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮಂಜೂರು ಮಾಡಿದ್ದು ಯಾವಾಗ; ಕಾಲೇಜಿನ ಆರಂಭ ಯಾವ ಹಂತದಲ್ಲಿದೆ; ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಕಾಲೇಜು ಆರಂಭವಾಗುವುದೇ;

(ಆ) ಬೀದರ್ ಗವಾನ್ ಸಂಶೋಧನಾ ಕೇಂದ್ರ (ಶೈಕ್ಷಣಿಕ) ಆರಂಭಿಸುತ್ತಿರುವುದು ನಿಜವೇ ;

(ಇ) ಹಾಗಿದ್ದಲ್ಲಿ, ಇಲ್ಲಿಯವರೆಗೆ ಯಾವ ಯಾವ ಕಾರ್ಯಗಳು ಪೂರ್ಣಗೊಂಡಿವೆ; ಈ ಸಂಶೋಧನಾ ಕೇಂದ್ರ ಯಾವ ಸೌಲಭ್ಯಗಳನ್ನೊಳಗೊಂಡಿರಲಿದೆ; ಈ ಸಂಶೋಧನಾ ಕೇಂದ್ರಕ್ಕೆ ಮಂಜೂರಾದ ಅನುದಾನ ಎಷ್ಟು ? (ಇಲ್ಲಿಯವರೆಗೆ ಖರ್ಚಾಗಿರುವ ಅನುದಾನದ ವಿವರ ನೀಡುವುದು)

## ಕಸ್ತೂರಿ ರಂಗನ್ ನೇತೃತ್ವದಲ್ಲಿ ಹೊಸ ಶಿಕ್ಷಣ ನೀತಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು):–**

೪೮೪ (೭೧೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಸ್ತೂರಿ ರಂಗನ್ ನೇತೃತ್ವದಲ್ಲಿ ಕರ್ನಾಟಕ ರಾಜ್ಯ ಹೊಸ ಶಿಕ್ಷಣ ನೀತಿಯನ್ನು ರೂಪಿಸಲಾಗಿದೆಯೇ;

(ಆ) ಕಸ್ತೂರಿ ರಂಗನ್ ನೇತೃತ್ವದಲ್ಲಿ ಜ್ಞಾನ ಆಯೋಗ ತಯಾರಿಸಿರುವ ಹೊಸ ಶಿಕ್ಷಣ ನೀತಿಯು ಪ್ರತಿ ನೀಡುವುದು; ಅದರ ಮುಖ್ಯಾಂಶಗಳೇನು; ಈ ಕುರಿತು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಪಠ್ಯ ಪುಸ್ತಕಗಳಲ್ಲಿ ಬದಲಾವಣೆ ಮಾಡಲಾಗಿದೆಯೇ; ಮಾಡಿದ್ದಲ್ಲಿ, ಬದಲಾವಣೆ ಮಾಡಲಾದ ಅಂಶಗಳ ಪಟ್ಟಿ ನೀಡುವುದು;

(ಈ) ಎಸ್.ಎಸ್.ಎಲ್.ಸಿ ಪರೀಕ್ಷಾ ಕ್ರಮದಲ್ಲಿ ಯಾವುದಾದರೂ ಬದಲಾವಣೆ ಮಾಡಲಾಗಿದೆಯೇ; ಮಾಡಿದ್ದಲ್ಲಿ, ಬದಲಾವಣೆ ಮಾಡಲಾದ ಅಂಶಗಳು ಕುರಿತು ವಿವರವಾದ ಮಾಹಿತಿ ನೀಡುವುದು ?

## ೦೧–೦೪–೨೦೦೮ ರ ನಂತರ ನೇಮಕಾತಿಯಾದ ಶಿಕ್ಷಕ / ಉಪನ್ಯಾಸಕರಿಗೆ ವೇತನ ಬಡ್ತಿ ನೀಡುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು):–**

೪೮೫ (೭೦೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಿ : ೦೧-೦೮-೨೦೦೮ ರ ನಂತರ ನೇಮಕವಾದ ಪ್ರೌಢ ಶಾಲಾ ಸಹ ಶಿಕ್ಷಕರು, ಮುಖ್ಯೋಪಾಧ್ಯಾಯರು, ಉಪನ್ಯಾಸಕರು ಹಾಗೂ ಪ್ರಾಚಾರ್ಯರಿಗೆ ಕುಮಾರ್ ನಾಯಕ್ ವರದಿಯನ್ವಯ ಒಂದು ವಿಶೇಷ ವೇತನ ಬಡ್ತಿಯನ್ನು ನೀಡಲಾಗಿದೆಯೇ; ನೀಡಿದ್ದರೆ, ಯಾವಾಗ ಯಾರು ಯಾರಿಗೆ ನೀಡಲಾಗಿದೆ; (ವಿವರ ನೀಡುವುದು)

(ಆ) ನೀಡದಿದ್ದಲ್ಲಿ, ಅದಕ್ಕೆ ಕಾರಣವೇನು : (ವಿವರ ನೀಡುವುದು)

(ಇ) ಯಾವ ಸಮಯ ಮಿತಿಯ ಒಳಗೆ ಇವರಿಗೆ ಆ ವೇತನ ಬಡ್ತಿಯನ್ನು ನೀಡಿ ಸಮಸ್ಯೆ ಬಗೆಹರಿಸಲಾಗುವುದು ?

## ಬಳ್ಳಾರಿಯ ಶ್ರೀ ಕೃಷ್ಣದೇವರಾಯ ವಿಶ್ವ ವಿದ್ಯಾಲಯದಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು):-**

೪೮೬ (೭೦೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಳ್ಳಾರಿಯ ಶ್ರೀ ಕೃಷ್ಣದೇವರಾಯ ವಿಶ್ವ ವಿದ್ಯಾಲಯದಲ್ಲಿ ಖಾಲಿ ಇರುವ ಬೋಧಕ/ಬೋಧಕೇತರರ ಹುದ್ದೆಗಳ ಸಂಖ್ಯೆ ಎಷ್ಟು; (ಹುದ್ದೆವಾರು ವಿವರ ನೀಡುವುದು) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲಾಗಿದೆಯೇ; ಮಾಡಿದ್ದರೆ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಯಾವಾಗ ಮತ್ತು ಎಷ್ಟು ಹುದ್ದೆಗಳಿಗೆ ಮತ್ತು ಯಾವ ಯಾವ ಹುದ್ದೆಗಳ ಭರ್ತಿಗೆ ಅಧಿಸೂಚನೆ ಹೊರಡಿಸಲಾಯಿತು; (ಅಧಿಸೂಚನೆಯ ದಿನಾಂಕ, ಅಧಿಸೂಚನೆಯ ಪ್ರತಿ ಒದಗಿಸುವುದು)

(ಆ) ಈ ನೇಮಕಾತಿಯಲ್ಲಿ ಅನುಸರಿಸಲಾದ ಹುದ್ದೆಗಳ ಮೀಸಲಾತಿಯ ಕುರಿತು ವಿವರ ನೀಡುವುದು;

(ಇ) ಸದರಿ ನೇಮಕಾತಿಯ ಕುರಿತು ಯಾವುದಾದರೂ ಆಕ್ಷೇಪಣೆಗಳು ಬಂದಿವೆಯೇ; ಬಂದಿದ್ದರೆ, ಯಾವ ಅಂಶಗಳ ಬಗ್ಗೆ ಬಂದಿದೆ ಮತ್ತು ಆಕ್ಷೇಪಣೆ ಸಲ್ಲಿಸಿದವರ ಮಾಹಿತಿಯನ್ನು ವಿವರದೊಂದಿಗೆ ಒದಗಿಸುವುದು;

(ಈ) ನೇಮಕಾತಿಯಲ್ಲಿ ಸರ್ಕಾರ ಮಧ್ಯಪ್ರವೇಶ ಮಾಡಿದೆಯೇ; (ಮಾಡಿದಲ್ಲಿ, ಪತ್ರ ವ್ಯವಹಾರಗಳ ಸಂಪೂರ್ಣ ಮಾಹಿತಿ ನೀಡುವುದು)

(ಉ) ಪ್ರಸ್ತುತ ಎಷ್ಟು ಹುದ್ದೆಗಳ ನೇಮಕಾತಿ ಮಾಡಲಾಗಿದೆ; ಯಾವ ಯಾವ ಹುದ್ದೆಗಳನ್ನು ನೇಮಕಾತಿ ಮಾಡಲಾಗಿದೆ; ನೇಮಕಾತಿ ಮಾಡಲು ಸಂದರ್ಶನ ನಡೆಸಿದ ದಿನಾಂಕ ಯಾವುದು; ಯಾರು ಯಾರು ಸಂದರ್ಶನ ನಡೆಸಿದ್ದಾರೆ; ಯಾವ ಯಾವ ಅಭ್ಯರ್ಥಿಗಳನ್ನು ಯಾವ ಯಾವ ಹುದ್ದೆಗಳಿಗೆ ನೇಮಕಾತಿ ಮಾಡಲಾಗಿದೆ; ನೇಮಕಾತಿ ಮಾಡಿ ಆದೇಶ ಪಡೆದ ಅಭ್ಯರ್ಥಿಗಳ ವಿವರಗಳನ್ನು ಹಾಗೂ ಆ ಎಲ್ಲಾ ನೇಮಕಾತಿ ಆದೇಶ ಹೊರಡಿಸಿದ ಪ್ರತಿಯೊಬ್ಬರ ಆದೇಶಗಳ ಪ್ರತಿ ನೀಡುವುದು; ನೇಮಕಾತಿ ಆದೇಶಕ್ಕೆ ಸಹಿ ಮಾಡಿದವರು ಯಾರು ಮತ್ತು ಯಾವ ದಿನಾಂಕದಂದು ನೇಮಕಾತಿ ಆದೇಶಕ್ಕೆ ಸಹಿ ಮಾಡಲಾಗಿದೆ; (ವಿವರ ನೀಡುವುದು) ಬಾಕಿ ಭರ್ತಿ ಮಾಡಬೇಕಾಗಿರುವ ಹುದ್ದೆಗಳು ಎಷ್ಟು ಮತ್ತು ಯಾವುವು; ನೇಮಕಾತಿಯ ಕಾರ್ಯ ಯಾವ ಹಂತದಲ್ಲಿದೆ;

(ಊ) ವಿಶ್ವ ವಿದ್ಯಾಲಯಗಳಲ್ಲಿ ಹುದ್ದೆಗಳ ಭರ್ತಿಗೆ ಅನುಸರಿಸಬೇಕಾದ ರೋಷ್ಟರ್ ನಿಯಮಾವಳಿಗಳೇನು; ಈ ನಿಯಮಗಳ ವಿವರವನ್ನು

ಸಂಪೂರ್ಣ ವಿಶ್ಲೇಷಣೆಯೊಂದಿಗೆ ನೀಡುವುದು; (ರೋಷ್ಟರ್ ನಿಯಮಾವಳಿಗಳ ಆದೇಶಗಳು, ಸುತ್ತೋಲೆಗಳು, ನಿಯಮಗಳು ಇವೆಲ್ಲವುಗಳ ಪ್ರತಿಯನ್ನು ನೀಡುವುದು)

(ಋ) ಈ ನೇಮಕಾತಿಯಲ್ಲಿ ರೋಷ್ಟರ್ ನಿಯಮಾವಳಿಗಳನ್ನು ಪಾಲನೆ ಮಾಡಿರುವುದಿಲ್ಲವೆನ್ನುವ ದೂರುಗಳು ಸರ್ಕಾರಕ್ಕೆ ಬಂದಿವೆಯೇ; ಬಂದಿದ್ದಲ್ಲಿ, ದೂರುಗಳ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮವೇನು? (ದೂರುಗಳ ಪಟ್ಟಿ ನೀಡುವುದು)

## ಕಾಲ್ಪನಿಕ ವೇತನ ಬಡ್ತಿ ನೀಡುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು):–**

೪೮೭ (೭೧೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾಲ್ಪನಿಕ ವೇತನ ಬಡ್ತಿ ನೀಡುವ ಕಾರ್ಯ ಯಾವ ಹಂತದಲ್ಲಿದೆ; ಈ ಕುರಿತು ಅಗತ್ಯ ದಾಖಲೆಗಳನ್ನು ಶಿಕ್ಷಕ/ಉಪನ್ಯಾಸಕರಿಂದ ಮಾಹಿತಿಯನ್ನು ಪಡೆಯಲಾಗುತ್ತಿದೆಯೇ; ಪಡೆಯುತ್ತಿದ್ದಲ್ಲಿ, ಯಾವ ಯಾವ ಮಾಹಿತಿಗಳನ್ನು ಪಡೆಯಲಾಗುತ್ತಿದೆ; (ಮಾಹಿತಿ ನೀಡುವುದು)

(ಆ) ಈ ಮಾಹಿತಿಗಳು ಸರ್ಕಾರದಲ್ಲಿ ಇಲಾಖೆಯಲ್ಲಿ ಲಭ್ಯವಿಲ್ಲವೇ; ಯಾವ ಕಾಲಮಿತಿಯ ಒಳಗೆ ಈ ಕಾಲ್ಪನಿಕ ವೇತನ ಬಡ್ತಿ ನೀಡುವ ಸಮಸ್ಯೆಯನ್ನು ಸರ್ಕಾರ ಬಗೆಹರಿಸಲು ಮುಂದಾಗುವುದು ?

## “ನಮ್ಮ ಗ್ರಾಮ ನಮ್ಮ ರಸ್ತೆ” ಯೋಜನೆಯ ಕಾಮಗಾರಿಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೮೮ (೬೭೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಮ್ಮ ಗ್ರಾಮ–ನಮ್ಮ ರಸ್ತೆ ಯೋಜನೆಯಲ್ಲಿ ಮಂಡ್ಯ ಜಿಲ್ಲೆಯಲ್ಲಿನ ರಸ್ತೆಗಳ ಅಭಿವೃದ್ಧಿಗಾಗಿ ಎಷ್ಟು ಅಂದಾಜು ಮೊತ್ತನ್ನು ಯಾವ ಯಾವ ರಸ್ತೆಗಳನ್ನು ವಿವಿಧ ಹಂತದಲ್ಲಿ ಪರಿಗಣಿಸಲಾಗಿದೆ; (ವಿವರ ನೀಡುವುದು)

(ಆ) ಮಂಡ್ಯ ಜಿಲ್ಲೆಯ ಯಾವ ಯಾವ ರಸ್ತೆಗಳು ಉಚಿತ ನಿರ್ವಹಣೆ ಮತ್ತು ದುರಸ್ಥಿ ಕೈಗೊಳ್ಳುವ ಕರಾರಿನಲ್ಲಿವೆ; ಅದರಂತೆ ಉಚಿತ ನಿರ್ವಹಣೆ ಮತ್ತು ದುರಸ್ಥಿ ಮಾಡಲಾಗಿದೆಯೇ;

(ಇ) ಹಾಗಿದ್ದಲ್ಲಿ, ಅಂತಹ ರಸ್ತೆಗಳು ಯಾವುವು; ಯಾವಾಗ ಮಾಡಲಾಗಿದೆ; (ವಿವರ ನೀಡುವುದು)

(ಈ) ನಮ್ಮ ಗ್ರಾಮ–ನಮ್ಮ ರಸ್ತೆ ಯೋಜನೆಯಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ಹಾಗೂ ಇತರೆ ಯೋಜನೆಯಲ್ಲಿ ಪರಿಗಣಿಸಿದ ರಸ್ತೆಗಳು ಯಾವುವು; ಇವುಗಳ ಕಾಮಗಾರಿಯ ಹಂತವೇನು; (ಪೂರ್ಣ ಮಾಹಿತಿ ನೀಡುವುದು)

(ಉ) ಕೆಲವು ರಸ್ತೆಗಳು ಆರಂಭದ ಹಂತದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಹಾಗಿದ್ದಲ್ಲಿ, ಅವುಗಳ ಕಾಮಗಾರಿಗಳನ್ನು ಯಾವಾಗ ಆರಂಭಿಸಿ ಪೂರ್ಣಗೊಳಿಸಲಾಗುವುದು?

## ಲೆಕ್ಕಾಧೀಕ್ಷಕರ ಹುದ್ದೆಗೆ ಬಡ್ತಿ ನೀಡುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೪೮೯ (೬೭೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಎಸ್.ಎ.ಎಸ್. ಪರೀಕ್ಷೆ ಉತ್ತೀರ್ಣಗೊಂಡು ಪ್ರಥಮ ದರ್ಜೆ ಸಹಾಯಕ ಹುದ್ದೆಯಲ್ಲಿ ೧೦ ವರ್ಷ ಸೇವೆ ಸಲ್ಲಿಸಿದ ನೌಕರರ ಜೇಷ್ಠತಾ ಪಟ್ಟಿ ತಯಾರಿಸಲಾಗಿದೆಯೇ; ಹಾಗಿದ್ದಲ್ಲಿ, ಈವರೆವಿಗೆ ಅವರುಗಳಿಗೆ ಲೆಕ್ಕಾಧೀಕ್ಷಕರ ಹುದ್ದೆಗೆ ಬಡ್ತಿ ನೀಡದಿರಲು ಕಾರಣವೇನು; (ವಿವರವಾದ ಮಾಹಿತಿ ನೀಡುವುದು)

(ಆ) ಬೆಂಗಳೂರು ಆಯುಕ್ತಾಲಯ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಲೆಕ್ಕಾಧೀಕ್ಷಕರ ವಿವರವಾದ ಮಾಹಿತಿ ನೀಡುವುದು; ಎಸ್.ಎ.ಡಿ. ಇಲಾಖೆ ಮತ್ತು ಸಾರ್ವಜನಿಕ ಶಿಕ್ಷಣ ಇಲಾಖೆಯ ನೌಕರರ ಮಾಹಿತಿಯನ್ನು ಪ್ರತ್ಯೇಕವಾಗಿ ನೀಡುವುದು;

(ಇ) ಬೆಂಗಳೂರು ಆಯುಕ್ತಾಲಯ ವ್ಯಾಪ್ತಿಯಲ್ಲಿ ಪ್ರಸ್ತುತ ಖಾಲಿಯಿರುವ ಖಾಲಿ ಹುದ್ದೆಗಳ ಸಂಪೂರ್ಣ ಹುದ್ದೆವಾರು ಮಾಹಿತಿ ನೀಡುವುದು?

## ಕೆ.ಆರ್.ಐ.ಡಿ.ಎಲ್. ನಿಂದ ಕೈಗೊಂಡ ಕಾಮಗಾರಿಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೪೯೦ (೬೭೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆಯಲ್ಲಿ ಕೆ.ಆರ್.ಐ.ಡಿ.ಎಲ್. ನಿಂದ ಕಳೆದ ೦೫ ವರ್ಷಗಳಿಂದ ಕೈಗೊಂಡಿರುವ ಕಾಮಗಾರಿಗಳು ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇವುಗಳಲ್ಲಿ ಪೂರ್ಣಗೊಂಡಿರುವ ಕಾಮಗಾರಿಗಳು ಎಷ್ಟು; ಹಾಗೂ ಬಳಕೆಯಾದ ಅನುದಾನವೆಷ್ಟು; (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

(ಇ) ಪೂರ್ಣಗೊಂಡ ಕಾಮಗಾರಿಗಳ ಗುಣಮಟ್ಟ ಪರಿಶೀಲಿಸಿದ ಏಜೆನ್ಸಿ ಯಾವುದು (Q.C.) ಹಾಗೂ ಏಜೆನ್ಸಿಯವರು ನೀಡಿದ ವರದಿಯ ಪ್ರತಿಗಳನ್ನು ಕಾಮಗಾರಿವಾರು ನೀಡುವುದು;

(ಈ) ಕೆ.ಆರ್.ಐ.ಡಿ.ಎಲ್. ವತಿಯಿಂದ ನಿರ್ವಹಿಸಿದ ಮತ್ತು ನಿರ್ವಹಿಸುತ್ತಿರುವ ಕಾಮಗಾರಿಗಳು ಕಳಪೆ ಗುಣಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕಳಪೆ ಕಾಮಗಾರಿಗಳನ್ನು ನಿರ್ವಹಿಸಿರುವವರ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ವಿವರವಾದ ಮಾಹಿತಿ ನೀಡುವುದು)

## ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೯೧ (೬೭೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು; ಈ ಕಾಲೇಜುಗಳಲ್ಲಿ ದಾಖಲಾತಿ ಮತ್ತು ಹಾಜರಾತಿ ವಿಭಾಗವಾರು ಹಾಗೂ ಮಂಜೂರಾಗಿರುವ ಹುದ್ದೆ ಖಾಲಿ ಹುದ್ದೆಗಳ ಮಾಹಿತಿಯನ್ನು ತಾಲ್ಲೂಕುವಾರು ನೀಡುವುದು; (ಬೋಧಕ ಮತ್ತು ಬೋಧಕೇತರ)

(ಆ) ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; ಪ್ರಸ್ತುತ ಖಾಲಿ ಹುದ್ದೆಗಳ ನಿರ್ವಹಣೆಗೆ ಯಾವ ಪರ್ಯಾಯ ವ್ಯವಸ್ಥೆ ಮಾಡಲಾಗಿದೆ;

(ಇ) ನಾಗಮಂಗಲ ತಾಲ್ಲೂಕು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿಜ್ಞಾನ ವಿಭಾಗ ತೆರೆಯುವ ಉದ್ದೇಶ ಸರ್ಕಾರದ ಮುಂದೆ ಇದೆಯೇ; ಹಾಗಿದ್ದಲ್ಲಿ, ಈ ಕಾಲೇಜಿನಲ್ಲಿ ವಿಜ್ಞಾನ ವಿಭಾಗ ಪ್ರಾರಂಭ ಮಾಡಲು ತೆಗೆದುಕೊಂಡ ಕ್ರಮಗಳೇನು?

## “ನಮ್ಮ ಹೊಲ–ನಮ್ಮ ರಸ್ತೆ” ಯೋಜನೆಯ ಕಾಮಗಾರಿಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೯೨ (೭೦೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭–೧೮ನೇ ಸಾಲಿನಲ್ಲಿ “ನಮ್ಮ ಹೊಲ–ನಮ್ಮ ರಸ್ತೆ” ಯೋಜನೆ ಜಾರಿಗೊಳಿಸಿ ಆದೇಶ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಆದೇಶದಂತೆ “ನಮ್ಮ ಹೊಲ–ನಮ್ಮ ರಸ್ತೆ” ಯೋಜನೆಯಡಿ ಕೈಗೆತ್ತಿಕೊಳ್ಳಲಾದ ಕಾಮಗಾರಿಗಳಾವುವು; ಈ ಕಾಮಗಾರಿಗಳು ಪ್ರಸ್ತುತ ಯಾವ ಹಂತದಲ್ಲಿದೆ; (ಮಾಹಿತಿ ನೀಡುವುದು)

(ಇ) ಈ ಕಾಮಗಾರಿಗಳಿಗೆ ನಿಗಧಿಪಡಿಸಿ, ಬಿಡುಗಡೆ ಮಾಡಿ, ವೆಚ್ಚ ಮಾಡಿರುವ ಅನುದಾನದ ಮೊತ್ತವೆಷ್ಟು; (ವಿವರ ನೀಡುವುದು)

(ಈ) ಈ ಯೋಜನೆಯಡಿ ಮಂಜೂರಾದ ಕಾಮಗಾರಿಗಳಿಗೆ ಅನುದಾನ ಬಿಡುಗಡೆಯಾಗದಿದ್ದಲ್ಲಿ, ಕಾರಣಗಳೇನು;

(ಉ) ಯಾವ ಕಾಲಮಿತಿಯೊಳಗೆ ಸದರಿ ಅನುದಾನ ಬಿಡುಗಡೆ ಮಾಡಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು)

## ಅನುದಾನಿತ ಶಾಲೆಗಳಲ್ಲಿ ಮಂಜೂರಾದ ಹುದ್ದೆಗಳಲ್ಲಿ ನಿವೃತ್ತಿ, ಸಾವುಗಳಿಂದ ಖಾಲಿಯಾಗಿರುವ ಹುದ್ದೆಗಳ ಬಗ್ಗೆ

**ಶ್ರೀ ಆಯನೂರು ಮಂಜುನಾಥ್ (ಪದವೀಧರರ ಕ್ಷೇತ್ರ):–**

೪೯೩ (೫೦೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಶಾಲೆಗಳಲ್ಲಿ ಮಂಜೂರಾದ ಹುದ್ದೆಗಳಲ್ಲಿ, ನಿವೃತ್ತಿ, ಸಾವು ಇತ್ಯಾದಿ ಕಾರಣಗಳಿಂದಾಗಿ ಖಾಲಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದ್ದಲ್ಲಿ, ಅವುಗಳನ್ನು ಭರ್ತಿ ಮಾಡಲು ಯಾವ ಕಾಲಮಿತಿಯೊಳಗೆ ಶಾಲಾ, ಕಾಲೇಜುಗಳಿಗೆ ಅನುಮತಿ ನೀಡಲಾಗುವುದು;

(ಇ) ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿರುವ ಖಾಯಂ ಹಾಗೂ ಅತಿಥಿ ಶಿಕ್ಷಕರೆಷ್ಟು; ಅತಿಥಿ ಶಿಕ್ಷಕರಿಗೆ ಉದ್ಯೋಗ ಭದ್ರತೆಯನ್ನು ನೀಡಲಾಗುವುದೇ;

(ಈ) ಸರ್ಕಾರವು ಅತಿಥಿ ಶಿಕ್ಷಕರಿಗೆ, ಉಪನ್ಯಾಸಕರಿಗೆ ಖಾಯಂಗೊಳಿಸುವ ಭರವಸೆಯುನ್ನು ನೀಡಿದೆಯೇ; ನೀಡಿದ್ದಲ್ಲಿ, ಯಾವಾಗ ಖಾಯಂಗೊಳಿಸಲಾಗುವುದು?

## ಪದವಿ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ಹಾಗೂ ಅತಿಥಿ ಉಪನ್ಯಾಸಕರ ಬಗ್ಗೆ

**ಶ್ರೀ ಆಯನೂರು ಮಂಜುನಾಥ್ (ಪದವೀಧರರ ಕ್ಷೇತ್ರ):–**

೪೯೪ (೫೦೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಪದವಿ ಕಾಲೇಜುಗಳಿವೆ; ಅವುಗಳಲ್ಲಿ ಪ್ರತಿಯೊಂದು ಕಾಲೇಜುಗಳಲ್ಲೂ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ಹಾಗೂ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಅತಿಥಿ ಉಪನ್ಯಾಸಕರು ಎಲ್ಲಾ ವಿದ್ಯಾರ್ಹತೆ ಹೊಂದಿದ್ದರು ಸಹ ಖಾಲಿಯಿರುವ ಹುದ್ದೆಗಳಿಗೆ ಅವರನ್ನು ಖಾಯಂಗೊಳಿಸಲು ಸರ್ಕಾರಕ್ಕೆ ಇರುವ ಸಮಸ್ಯೆಗಳೇನು;

(ಇ) ಇವರುಗಳು ವಯೋಮಿತಿಯನ್ನು ದಾಟುತ್ತಿದ್ದು, ಅಭದ್ರತೆಯಿಂದಾಗಿ ಮಾನಸಿಕ ತೊಳಲಾಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವರಿಗೆ ಸೇವಾ ಭದ್ರತೆಯನ್ನು ನೀಡಲಾಗುವುದೇ;

(ಈ) ಅತಿಥಿ ಉಪನ್ಯಾಸಕರನ್ನೂ ಖಾಯಂಗೊಳಿಸುವುದಾಗಿ ಸರ್ಕಾರವು ಭರವಸೆ ನೀಡಿದೆಯೇ; ನೀಡಿದ್ದಲ್ಲಿ, ಯಾವಾಗ ಖಾಯಂ ಗೊಳಿಸಲಾಗುವುದು?

## ಶಿವಮೊಗ್ಗ ತಾಲ್ಲೂಕ್ ಹೊಳಲೂರು-ಬೂದಿಗೆರೆ ಯೋಜನೆ ಸುಮಾರು ೧೨ ವರ್ಷಗಳಾದರೂ ಪೂರ್ಣಗೊಳ್ಳದಿರುವ ಬಗ್ಗೆ

**ಶ್ರೀ ಆಯನೂರು ಮಂಜುನಾಥ್ (ಪದವೀಧರರ ಕ್ಷೇತ್ರ):-**

೪೯೫ (೫೦೫) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೦೭ ರಲ್ಲಿ ೬.೨೫ ಕೋಟಿಗೆ ಮಂಜೂರಾಗಿದ್ದ ಶಿವಮೊಗ್ಗ ತಾಲ್ಲೂಕಿನ ಹೊಳಲೂರು-ಬೂದಿಗೆರೆ ಯೋಜನೆಯು ೨೦೧೯ರವರೆಗೆ ೧೨.೨೦ ಕೋಟಿ ಖರ್ಚಾಗಿದ್ದರೂ

ಮುಕ್ತಾಯವಾಗದೆ ಪುನಃ ೯ ಕೋಟಿಗೆ ಪ್ರಸ್ತಾವನೆ ಸಲ್ಲಿಸಿರುವುದು ನಿಜವೇ; ಹಾಗಿದ್ದಲ್ಲಿ, ಸುಮಾರು ೧೨ ವರ್ಷಗಳಾದರೂ ಪೂರ್ಣಗೊಳ್ಳದಿರಲು ಕಾರಣವೇನು;

(ಆ) ಈ ಯೋಜನೆಯಲ್ಲಿ ಭ್ರಷ್ಟಾಚಾರ ನಡೆದಿರುವುದು ಹಾಗೂ ಆಡಿಟ್ ಮತ್ತು ತಪಾಸಣೆ ವರದಿಯಲ್ಲಿ ಗುರುತಿಸಲಾದ ಲೋಪದೋಷಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲಿ, ಕೈಗೊಂಡ ಕ್ರಮಗಳೇನು;

(ಇ) ನಕಲಿ ಬಿಲ್, ಕೊಟೇಷನ್‌ಗಳು, ಸುಳ್ಳು ರಿಪೇರಿ ಮೂಲಕ ಕೋಟ್ಯಾಂತರ ರೂಪಾಯಿ ಲೂಟಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಈ) ಈ ಯೋಜನೆಯನ್ನು ಶೀಘ್ರವಾಗಿ ಮುಕ್ತಾಯಗೊಳಿಸಿ ರೈತರಿಗೆ ನೀರು ಯಾವ ಕಾಲಮಿತಿಯೊಳಗೆ ಒದಗಿಸಲಾಗುವುದು?

## ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಉಪನ್ಯಾಸಕರ ನಿಯೋಜನೆ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):–**

೪೯೬ (೫೧೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಉಪನ್ಯಾಸಕರನ್ನು ಅವರು ನೇಮಕಗೊಂಡ ಕಾಲೇಜುಗಳಿಂದ ಬೇರೆ ಕಡೆ ನಿಯೋಜಿಸುತ್ತಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ಇಲ್ಲಿಯುವರೆಗೆ ಎಷ್ಟು ಉಪನ್ಯಾಸಕರನ್ನು ನಿಯೋಜಿಸಲಾಗಿದೆ; (ಸಂಪೂರ್ಣವಾದ ವಿವರ ನೀಡುವುದು)

(ಇ) ಈ ರೀತಿ ನಿಯೋಜಿಸಲು ಶೈಕ್ಷಣಿಕ ಅಥವಾ ಆಡಳಿತಾತ್ಮಕ ಕಾರಣಗಳಿವೆಯೇ; (ಕಾರಣಗಳಿದ್ದಲ್ಲಿ ವಿವರ ನೀಡುವುದು)

(ಈ) ಈ ರೀತಿ ನಿಯೋಜನೆ ಮಾಡುವುದರಿಂದ ಅವರು ನೇಮಕಾತಿ ಹೊಂದಿದ ಕಾಲೇಜಿನಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಆಗುತ್ತಿರುವ ಶೈಕ್ಷಣಿಕ ಹಿನ್ನಡೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ನಿಯೋಜನೆಯಿಂದ ಖಾಲಿಯಾದ ಉಪನ್ಯಾಸಕರ ವಿಷಯಗಳ ಬೋಧನೆಗೆ ಸರ್ಕಾರ ಪರ್ಯಾಯ ವ್ಯವಸ್ಥೆ ಮಾಡುತ್ತಿದೆಯೇ;

(ಊ) ಪರ್ಯಾಯ ವ್ಯವಸ್ಥೆ ಮಾಡದಿದ್ದಲ್ಲಿ ವಿದ್ಯಾರ್ಥಿಗಳ ಭವಿಷ್ಯಕ್ಕೆ ಕೊಡಲಿಪೆಟ್ಟು ಬಿದ್ದಂತಾಗುವುದಿಲ್ಲವೇ;

(ಋ) ನಿಯೋಜನೆ ವ್ಯವಸ್ಥೆಯನ್ನು ರದ್ದುಪಡಿಸುವ ಉದ್ದೇಶ ಸರ್ಕಾರಕ್ಕಿದೆಯೇ; ಇದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

## ಅಧೀಕ್ಷಕರು ಕನ್ನಡ ವಿಶ್ವವಿದ್ಯಾಲಯ ಹಂಪಿ ಇವರ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):–**

೪೯೭ (೪೮೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕನ್ನಡ ವಿಶ್ವವಿದ್ಯಾಲಯ ಹಂಪಿಯಲ್ಲಿ ಪ್ರಸ್ತುತ ಅಧೀಕ್ಷಕರಾಗಿ ಕೆಲಸ ನಿರ್ವಹಿಸುತ್ತಿರುವ ನೌಕರರು ಮೂಲವಾಗಿ ಯಾವ ಹುದ್ದೆಗೆ ನೇಮಕವಾಗಿದ್ದರು; (ನೇಮಕಾತಿಯ ಬಗ್ಗೆ ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಇವರು ವ್ಯಾಟ್ಸಪ್ ಹಾಗೂ ಫೇಸ್‌ಬುಕ್‌ನಲ್ಲಿ ಅವಹೇಳನಕಾರಿ ಹೇಳಿಕೆಗಳನ್ನು ಹಾಕಿದ್ದರಿಂದ ಇವರ ವಿರುದ್ಧ ಕಮಲಾಪುರ ಪೊಲೀಸ್ ಠಾಣೆಯಲ್ಲಿ ಯಾವ ದಿನಾಂಕದಂದು ದೂರು ದಾಖಲಾಗಿತ್ತು;

(ಇ) ಈ ದೂರಿನನ್ವಯ ಸದರಿಯವರು ಎಷ್ಟು ಅವಧಿಯವರೆಗೆ ನ್ಯಾಯಾಂಗ ಅಭಿರಕ್ಷೆಯಲ್ಲಿದ್ದರು;

(ಈ) ಇವರ ವಿರುದ್ಧ ನಿವೃತ್ತ ನ್ಯಾಯಾಧೀಶರಿಂದ ವಿಚಾರಣೆ ನಡೆಸಿ ವಿಶ್ವವಿದ್ಯಾಲಯಕ್ಕೆ ವಿಚಾರಣಾ ವರದಿ ಸಲ್ಲಿಸಲಾಗಿದೆಯೇ ;

(ಉ) ಈ ವರದಿಯನ್ವಯ ಯಾವ ಕ್ರಮ ಕೈಗೊಳ್ಳಲಾಗಿದೆ;

(ಊ) ಸದರಿಯವರು ನೇರವಾಗಿ ಮಾಧ್ಯಮಕ್ಕೆ ಹೋಗಲು ಹಾಗೂ ಮಾಹಿತಿ ಹಕ್ಕಿನಡಿ ಮಾಹಿತಿ ಕೇಳಲು ವಿಶ್ವವಿದ್ಯಾಲಯದ ಅನುಮತಿ ಪಡೆದಿದ್ದಾರೆಯೇ;

(ಋ) ಅಮಾನತ್ತಾದ ಸದರಿ ನೌಕರರನ್ನು ಪುನಃ ಯಾವಾಗ ಸೇವೆಗೆ ಸೇರಿಸಿಕೊಂಡು ವೇತನ ನೀಡಲಾಗುತ್ತಿದೆ;

(ೠ) ಅಮಾನತ್ತು ಹಿಂಪಡೆಯಲು ಕಾರಣಗಳೇನು;

(ಎ) ಈ ಪ್ರಕರಣದ ಸಂಪೂರ್ಣ ತನಿಖೆಯನ್ನು ಯಾವುದಾದರೂ ತನಿಖಾ ಏಜೆನ್ಸಿಗೆ ವಹಿಸಲು ಸರ್ಕಾರ ಕ್ರಮ ಕೈಗೊಳ್ಳುವುದೆ?

## ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಬೋಧಕರ ಕೊರತೆ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ  ಕ್ಷೇತ್ರ):–**

೪೯೮ (೪೮೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರವು ಇಲ್ಲಿಯವರೆಗೆ ಪ್ರಾರಂಭಿಸಿರುವ ಕರ್ನಾಟಕ ಪಬ್ಲಿಕ್ ಶಾಲೆಗಳ ಸಂಖ್ಯೆ ಎಷ್ಟು;

(ಆ) ಯಾವ ಯಾವ ಸ್ಥಳಗಳಲ್ಲಿ ಈ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲಾಗಿದೆ;

(ಇ) ಎಷ್ಟು ಕರ್ನಾಟಕ ಪಬ್ಲಿಕ್ ಶಾಲೆಗಳು ಒಂದೇ ಆವರಣದಲ್ಲಿ ನಡೆಯುತ್ತಿವೆ;

(ಈ) ಬೇರೆ ಬೇರೆಯಾಗಿ ಕೆಲಸ ನಿರ್ವಹಿಸುತ್ತಿರುವ ಪ್ರಾಚಾರ್ಯರು ಮತ್ತು ಶಿಕ್ಷಕರು ಒಂದೇ ಅಡಿಯಲ್ಲಿ ಬರಲು ಕೈಗೊಂಡಿರುವ ಕ್ರಮಗಳೇನು;

(ಉ) ಈ ಶಾಲೆಗಳಲ್ಲಿ ಬೋಧಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಬಂದಿದ್ದಲ್ಲಿ, ಖಾಲಿ ಇರುವ ಎಲ್ಲಾ ಬೋಧಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

## ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಿಗೆ ಕುಲಪತಿಗಳ ನೇಮಕಾತಿ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೪೯ (೪೯೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೧೯೭೩ ರಿಂದ ಇಲ್ಲಿಯವರೆಗೆ ಕರ್ನಾಟಕದಲ್ಲಿನ ವಿವಿಧ ವಿಶ್ವವಿದ್ಯಾಲಯಗಳಿಗೆ ಕುಲಪತಿಗಳಾಗಿ ಕಾರ್ಯನಿರ್ವಹಿಸಿದವರ ಹೆಸರುಗಳೇನು ;

(ಆ) ಇವರು ಯಾವ ಜಿಲ್ಲೆ ಹಾಗೂ ತಾಲ್ಲೂಕುಗಳಿಗೆ ಸೇರಿದವರು (ಸಂಪೂರ್ಣ ವಿಳಾಸ ಒದಗಿಸುವುದು)

(ಇ) ಇವರಲ್ಲಿ ಉತ್ತರ ಕರ್ನಾಟಕಕ್ಕೆ ಸೇರಿದ ಕುಲಪತಿಗಳ ಸಂಖ್ಯೆ ಎಷ್ಟು ;

(ಈ) ಕುಲಪತಿಗಳ ನೇಮಕಾತಿಯಲ್ಲಿ ಉತ್ತರ ಕರ್ನಾಟಕಕ್ಕೆ ಅನ್ಯಾಯವಾಗಿರುವುದು ನಿಜವೇ ;

(ಉ) ಹಾಗಿದ್ದಲ್ಲಿ, ಈ ಅನ್ಯಾಯವನ್ನು ಸರಿಪಡಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

## ನಾರಾಯಣಪುರ ಬಲದಂಡೆ ಆಧುನೀಕರಣ ಕಾಮಗಾರಿ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೦೦ (೪೯) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಾರಾಯಣಪುರ ಬಲದಂಡೆ ಆಧುನೀಕರಣಕ್ಕೆ ಮುಂಗಡ ಪತ್ರದಲ್ಲಿ ಪ್ರಸ್ತಾಪಿಸಿದ್ದರೂ ಪ್ರಸ್ತುತ ಇನ್ನೂ ಕಾಮಗಾರಿ ಪ್ರಾರಂಭವಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ಮತ್ತು ಆಧುನೀಕರಣದ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ?

## ಸಣ್ಣ ನೀರಾವರಿ ಯೋಜನೆ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೦೧ (೫೦೧) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೪ ವರ್ಷಗಳಿಂದ ರಾಯಚೂರು ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಯಾವ ಯಾವ ಯೋಜನೆಗಳನ್ನು ಕೈಗೊಳ್ಳಲಾಗಿದೆ; (ವಿವರ ಒದಗಿಸುವುದು)

(ಆ) ಹೊಸ ಯೋಜನೆಗಳಿಗೆ ಪ್ರಸ್ತಾವನೆಗಳು ಬಂದಿವೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ? (ವಿವರ ಒದಗಿಸುವುದು)

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವ್ಯಾಪ್ತಿಗೆ ಬರುವ ಕೆರೆಗಳ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೦೨ (೫೦೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯ ವ್ಯಾಪ್ತಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವ್ಯಾಪ್ತಿಗೆ ಬರುವ ಕೆರೆಗಳು ಯಾವುವು; (ಕೆರೆ ಸರ್ವೆ ನಂ. ವಿಸ್ತೀರ್ಣ ಮತ್ತು ನೀರಾವರಿ ಆಗುವ ಕ್ಷೇತ್ರಗಳ ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಿಂದ ಇಲ್ಲಿಯವರೆಗೆ ಅವುಗಳ ಅಭಿವೃದ್ಧಿಗಾಗಿ ವಿವಿಧ ಲೆಕ್ಕಶೀರ್ಷಿಕೆ ಅಡಿಯಲ್ಲಿ ಯಾವ ಕೆರೆಗಳ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; (ಅನುದಾನದ ಅಂಕಿ ಅಂಶ ಸಮೇತ ವಿವರ ಒದಗಿಸುವುದು)

(ಇ) ಕೆರೆಗಳ ಅಭಿವೃದ್ಧಿಗೆ ಹೊಸದಾಗಿ ಪ್ರಸ್ತಾವನೆಗಳು ಬಂದಿವೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮವೇನು ?

## ರಾಯಚೂರು ಜಿಲ್ಲಾ ಪಂಚಾಯತ್ ಹಾಗೂ ಗ್ರಾಮೀಣ ರಸ್ತೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೫೦೩ (೭೦೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ ರಿಂದ ಇಲ್ಲಿಯುವರೆಗೂ ರಾಯುಚೂರು, ಜಿಲ್ಲಾಪಂಚಾಯಿತಿಗೆ ಮಂಜೂರಾಗಿರುವ ವಿವಿಧ ಯೋಜನೆಗಳು ಯಾವುವು ; ಈ ಯೋಜನೆಗಳಿಗೆ ಬಿಡುಗಡೆಯಗಿರುವ ಅನುದಾನ ಎಷ್ಟು ;

(ಆ) ರಾಯಚೂರು ಜಿಲ್ಲೆಯಲ್ಲಿರುವ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳು ಎಷ್ಟು; ಸದರಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರು ಜಿಲ್ಲೆಯಲ್ಲಿರುವ ಗ್ರಾಮೀಣ ರಸ್ತೆಗಳ ಅಭಿವೃದ್ಧಿಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಖಾಲಿ ಇರುವ ಶಿಕ್ಷಕರುಗಳ ಹುದ್ದೆ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೫೦೪ (೭೦೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿರುವ ಸರ್ಕಾರಿ ಪಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ೨೦೧೮–೧೯ ನೇ ಸಾಲಿನಿಂದ ರಾಯಚೂರು ಜಿಲ್ಲೆಯಲ್ಲಿ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ್ ಶಾಲೆಗಳಲ್ಲಿ ನಿರ್ಮಾಣಗೊಂಡಿರುವ ಶಾಲಾ ಕೊಠಡಿಗಳ ಸಂಖ್ಯೆ ಎಷ್ಟು ; ಈ ಕಾಮಗಾರಿಗೆ ಮಂಜೂರಾಗಿರುವ ಅನುದಾನ ಎಷ್ಟು ; ಸದರಿ ಶಾಲೆಗಳಲ್ಲಿ ಕೊಠಡಿಗಳ ನಿರ್ಮಾಣಕ್ಕೆ ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಮಂಜೂರಾಗಿರುವ ಅನುದಾನ ಎಷ್ಟು ?

## ತುಂಗಭದ್ರಾ ಅಣೆಕಟ್ಟುವಿನ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೫೦೫ (೭೦೩) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭದ್ರಾ ಅಣೆಕಟ್ಟುವಿನ ಕೆಳಭಾಗದಿಂದ ಹಿಡಿದು ತುಂಗಭದ್ರಾ ಅಣೆಕಟ್ಟುವಿನವರೆಗೂ ನೀರಾವರಿ ಹಾಗೂ ಕುಡಿಯುವ ನೀರಿಗೆ ಹಾಗೂ ವಿವಿಧ ಯೋಜನೆಗಳಿಗೆ ಎಷ್ಟು ಟಿಎಂಸಿ ನೀರನ್ನು ಉಪಯೋಗಿಸಿಕೊಳ್ಳಲು ಸರ್ಕಾರ ಮಂಜೂರಾತಿ ನೀಡಿದೆ ;

(ಆ) ತುಂಗಭದ್ರಾ ವ್ಯಾಪ್ತಿಯ ಸಿಂದನೂರು–ಯರಮರಸ್–ಸಿರವಾರ ಈ ಮೂರು ವಿಭಾಗಗಳಲ್ಲಿ ಬರುವ ಉಪಕಾಲುವೆಗಳಲ್ಲಿ ಹೂಳು ತೆಗೆಯಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಕಾಲುವೆಗಳ ಸರ್ವೀಸ್ ರಸ್ತೆಗಳನ್ನು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ಕೃಷ್ಣಾ ನದಿಯ ಗೂಗಲ್ ಬ್ಯಾರಜಿನಿಂದ ಗಣೆಕಲ್ಲ ಸಮತೋಲನ ಜಲಾಶಯಕ್ಕೆ ನೀರು ಒದಗಿಸಲು ರೂ.೧೪೦ ಕೋಟಿ ರೂಪಾಯಿಗಳ ಏತ ನೀರಾವರಿ ಯೋಜನೆಗೆ ಟೆಂಡರ್ ಕರೆಯಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

# ಕೆರೆ ಅಭಿವೃದ್ಧಿ ನಾಡಿನ ಶ್ರೇಯೋಭಿವೃದ್ಧಿ ಯೋಜನೆಯು ಮಂದಗತಿಯಲ್ಲಿ ಸಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೦೬ (೬೮೮) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ರೈತರಿಗೆ ಸಹಾಯ ಮತ್ತು ಉತ್ತೇಜನ ನೀಡುವ ಉದ್ದೇಶದಿಂದ **"ಕೆರೆ ಅಭಿವೃದ್ಧಿ ನಾಡಿನ ಶ್ರೇಯೋಭಿವೃದ್ಧಿ"** ಯೋಜನೆಯನ್ನು ತಂದಿದ್ದರೂ ಇದರ ಫಲ ರಾಜ್ಯದ ರೈತಬಾಂಧವರಿಗೆ ಪರಿಣಾಮಕಾರಿಯಾಗಿ ದೊರಕದೆ ಕೆಲಸ ಕಾರ್ಯಗಳು ಮಂದಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಯೋಜನೆಯಡಿಯಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಆಯ್ಕೆಯಾದ ಕೆರೆಗಳು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಬೆಳಗಾವಿ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ "ಕೆರೆ ಅಭಿವೃದ್ಧಿ ನಾಡಿನ ಶ್ರೇಯೋಭಿವೃದ್ಧಿ" ಯೋಜನೆಯಡಿ ಆಯ್ಕೆಯಾದ ಕೆರೆಗಳ ಕಾಮಗಾರಿಗಳು ಸಂಪೂರ್ಣವಾಗಿ ಮುಗಿದಿವೆಯೇ ;

(ಈ) ಸನ್ ೨೦೧೫–೧೬, ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿನಲ್ಲಿ ಈ ಯೋಜನೆಯ ಅನುಷ್ಠಾನಕ್ಕೆ ಸರ್ಕಾರವು ಬಿಡುಗಡೆ ಮಾಡಿದ ಅನುದಾನವೆಷ್ಟು ; ಬಾಕಿ ಉಳಿದಿರುವ ಅನುದಾನವೆಷ್ಟು; ವರ್ಷವಾರು, ತಾಲ್ಲೂಕುವಾರು, ಕೆರೆವಾರು (ಪ್ರತಿ ಕೆರೆಗೆ ನಿಗದಿಪಡಿಸಿದ) ಅನುದಾನವೆಷ್ಟು ; (ವಿವರ ನೀಡುವುದು)

(ಉ) ಕೆರೆಗಳಿಗೆ ಸುತ್ತುಮುತ್ತಲಿನ ಮಳೆ ನೀರು ಸಂಗ್ರಹಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು ?

# ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯವು ಮೂಲಭೂತ ಸೌಲಭ್ಯಗಳನ್ನು ನಿರ್ಮಿಸಿಕೊಳ್ಳದಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೦೭ (೬೮೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿಯಲ್ಲಿರುವ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯವನ್ನು ಯಾವ ವರ್ಷದಲ್ಲಿ ಆರಂಭಿಸಲಾಯಿತು ;

(ಆ) ಈ ವಿಶ್ವವಿದ್ಯಾಲಯಕ್ಕಾಗಿ ಎಷ್ಟು ಎಕರೆ ಜಮೀನನ್ನು ಹಂಚಿಕೆ ಮಾಡಲಾಗಿದೆ ;

(ಇ) ಈ ಹಂಚಿಕೆಯಾದ ಭೂಮಿಯಲ್ಲಿ ಎಷ್ಟು ಎಕರೆ ಜಮೀನನ್ನು ವಿಶ್ವವಿದ್ಯಾಲಯಕ್ಕೆ ಹಸ್ತಾಂತರಿಸಲಾಗಿದೆ ;

(ಈ) ಈ ವಿಶ್ವವಿದ್ಯಾಲಯ ಆರಂಭವಾದಾಗಿನಿಂದ ಮೂಲಭೂತ ಸೌಲಭ್ಯ ಮತ್ತು ಕಟ್ಟಡ ನಿರ್ಮಾಣಕ್ಕಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ವರ್ಷವಾರು ವಿವರ ನೀಡುವುದು)

(ಉ) ಬಿಡುಗಡೆಯಾದ ಹಣದಲ್ಲಿ ಎಷ್ಟು ಹಣವನ್ನು ವ್ಯಯ ಮಾಡಲಾಗಿದೆ; (ಶೀರ್ಷಿಕೆವಾರು ಮಾಹಿತಿಯನ್ನು ಒದಗಿಸುವುದು)

(ಊ) ಪೂರ್ತಿ ಹಣ ಖರ್ಚಾಗದೆ ಉಳಿದಿದ್ದಲ್ಲಿ ಇದಕ್ಕೆ ಕಾರಣವೇನು? (ಮಾಹಿತಿ ನೀಡುವುದು)

## ಬೆಳಗಾವಿ ಜಿಲ್ಲೆಯ ಹುಕ್ಕೇರಿ ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿರುವ ಡಯಾಲಿಸೀಸ್ ಘಟಕ ದುರಸ್ಥಿಗೊಂಡಿದ್ದು ಇದರಿಂದ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಯ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೦೮ (೬೮೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹುಕ್ಕೇರಿ ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಡಯಾಲಿಸೀಸ್ ಘಟಕವನ್ನು ಯಾವಾಗ ಆರಂಭಿಸಲಾಗಿದೆ ;

(ಆ) ಈ ಡಯಾಲಿಸೀಸ್ ಘಟಕದ ನಿರ್ವಹಣೆಯನ್ನು ಯಾರಿಗೆ ವಹಿಸಲಾಗಿದೆ ;

(ಇ) ವಿದ್ಯುತ್ ಹಾಗೂ ನೀರಿನ ಸರಬರಾಜಿನ ಕೊರತೆಯಿಂದ ಈ ಯಂತ್ರವು ಸ್ಥಗಿತಗೊಂಡಿದ್ದು, ಇದರಿಂದ ಸಾರ್ವಜನಿಕರು ತೊಂದರೆಗೊಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ನಿರಂತರ ನೀರು ಹಾಗೂ ವಿದ್ಯುತ್ತಿನ ಸರಬರಾಜು ಮಾಡುವ ನಿಟ್ಟಿನಲ್ಲಿ ಹಾಗೂ ನಿರ್ವಾಹಕರ ನಿಷ್ಕಾಳಜಿಯ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯ ಅನುಷ್ಠಾನದಲ್ಲಿ ಆಗುತ್ತಿರುವ ದುರ್ಬಳಕೆ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೦೯ (೬೯೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಡವರು ಹಾಗೂ ಮಧ್ಯಮ ವರ್ಗದ ಜನರಿಗೆ ಉಚಿತ ಆರೋಗ್ಯ ಸೇವೆಯನ್ನು ಒದಗಿಸಲು ಜಾರಿಗೆ ತಂದಿರುವ "ಆಯುಷ್ಮಾನ

ಭಾರತ್ ಆರೋಗ್ಯ ಕರ್ನಾಟಕ” ಯೋಜನೆಯ ಅನುಷ್ಠಾನದಲ್ಲಿ ದುರ್ಬಳಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೆಳಗಾವಿ ಜಿಲ್ಲೆಯಲ್ಲಿ ಈ ಯೋಜನೆಗಾಗಿ ನೀಡುವ ಕಾರ್ಡುಗಳನ್ನು ವಿತರಿಸಲು ಸರ್ಕಾರ ನಿಯೋಜಿಸಿದ ಸಂಸ್ಥೆಗಳ ಹೆಸರುಗಳನ್ನು ನೀಡುವುದು ;

(ಇ) “ಅನರ್ಹರಿಗೂ ಆಯುಷ್ಮಾನ್” ಶೀರ್ಷಿಕೆಯಲ್ಲಿ ಏಪ್ರಿಲ್ ೨೬ ರಂದು ಕನ್ನಡ ಪತ್ರಿಕೆಯೊಂದರಲ್ಲಿ ಫಲಾನುಭವಿಗಳಿಂದ ನಿಗದಿಪಡಿಸಿದ ದರಕ್ಕಿಂತ ಹೆಚ್ಚು ಹಣ ವಸೂಲಿ ಮಾಡಿ ಅನರ್ಹರಿಗೂ ಕಾರ್ಡ್ ನೀಡಿರುವ ಕುರಿತು ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಇಂತಹ ಅವ್ಯವಹಾರವನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ಹಾಗೂ ಈಗಾಗಲೇ ತಪ್ಪು ಎಸಗಿರುವವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಸರ್ಕಾರಿ ಆಂಗ್ಲ ಮಾಧ್ಯಮ ಶಾಲೆಗಳು

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):–**

೫೧೦ (೫೧೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ವತಿಯಿಂದ ಕರ್ನಾಟಕ ಪಬ್ಲಿಕ್ ಸ್ಕೂಲ್‌ಗಳ ಮೂಲಕ ಸರ್ಕಾರಿ ಶಾಲೆಗಳಲ್ಲಿ ಆಂಗ್ಲ ಮಾಧ್ಯಮ ಶಾಲೆಗಳನ್ನು ಪ್ರಾರಂಭ ಮಾಡಿರುವುದರಿಂದ, ಮಾತೃಭಾಷೆಯಾದ ಕನ್ನಡವನ್ನು ಸರ್ಕಾರವೇ ಅವಗಣನೆ ಮಾಡಿದಂತಾಗಿಲ್ಲವೇ ;

(ಆ) ಕೆ.ಪಿ.ಎಸ್. ಶಾಲೆಗಳಲ್ಲಿ ಆಂಗ್ಲ ಮಾಧ್ಯಮದಲ್ಲಿ ಬೋಧನೆ ಮಾಡಲು ತರಬೇತು ಪಡೆದ ಆಂಗ್ಲ ಬೋಧಕ ಶಿಕ್ಷಕರನ್ನು ನೇಮಕ ಮಾಡಲಾಗಿದೆಯೇ ಅಥವಾ ಕನ್ನಡ ಮಾಧ್ಯಮದಲ್ಲಿ ಬೋಧಿಸುತ್ತಿದ್ದ ಶಿಕ್ಷಕರಿಗೆ ಈ ಜವಾಬ್ದಾರಿಯನ್ನು ವಹಿಸಲಾಗಿದೆಯೇ ;

(ಇ) ಪ್ರಸ್ತುತ ಪ್ರಾರಂಭಿಸಿರುವ ಕೆ.ಪಿ.ಎಸ್ ಶಾಲೆಗಳಲ್ಲಿ ವಿದ್ಯಾರ್ಥಿ ಮತ್ತು ಶಿಕ್ಷಕರ ಅನುಪಾತವೆಷ್ಟು ?

## ಸರ್ಕಾರಿ ಪ್ರಾಥಮಿಕ ಪ್ರೌಢ ಶಾಲೆಗಳಿಗೆ ಅತಿಥಿ ಶಿಕ್ಷಕರ ನೇಮಕಾತಿ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):-**

೫೧೧ (೭೨೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಪ್ರಾಥಮಿಕ, ಪ್ರೌಢ ಶಾಲೆಗಳಿಗೆ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗುತ್ತಿದೆಯೇ ;

(ಆ) ಹಾಗಾದಲ್ಲಿ, ೨೦೧೮-೧೯ನೇ ಸಾಲಿನಲ್ಲಿ ನೇಮಕ ಮಾಡಿಕೊಂಡ ಒಟ್ಟು ಅತಿಥಿ ಶಿಕ್ಷಕರ ಸಂಖ್ಯೆ ಎಷ್ಟು; (ಪ್ರತ್ಯೇಕವಾಗಿ ವಿವರ ಒದಗಿಸುವುದು)

(ಇ) ಅತಿಥಿ ಶಿಕ್ಷಕರಿಗೆ ತಲಾ ಮಾಸಿಕ ನೀಡಲಾಗುತ್ತಿರುವ ಗೌರವಧನದ ಮೊತ್ತವೆಷ್ಟು ;

(ಈ) ಅತಿಥಿ ಶಿಕ್ಷಕರ ಗೌರವಧನವನ್ನು ಪರಿಷ್ಕರಿಸಲು ಸರ್ಕಾರ ಚಿಂತನೆ ನಡೆಸಿದೆಯೇ ;

(ಉ) ೨೦೧೯-೨೦ ನೇ ಸಾಲಿಗೆ ಈಗಾಗಲೇ ನೇಮಕಗೊಂಡಿರುವ ಅತಿಥಿ ಶಿಕ್ಷಕರ ಸಂಖ್ಯೆ ಎಷ್ಟು ?

## ಉಪನ್ಯಾಸಕರಿಗೆ ಮೌಲ್ಯ ಮಾಪನ ಭತ್ಯೆ ಮತ್ತು ಇತರೆ ಸೌಲಭ್ಯ ನೀಡುವ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೫೧೨ (೭೨೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮–೧೯ನೇ ಸಾಲಿನಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿನ ಪರೀಕ್ಷೆ ಮತ್ತು ಮೌಲ್ಯ ಮಾಪನ ಕಾರ್ಯಗಳಲ್ಲಿ ತೊಡಗಿಸಿಕೊಂಡ ಬೋಧಕ / ಬೋಧಕೇತರ ಸಿಬ್ಬಂದಿಗಳಿಗೆ ಮೌಲ್ಯ ಮಾಪನ ಮತ್ತು ಇತರೆ ಭತ್ಯೆಗಳನ್ನು ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದಲ್ಲಿ, ಇದುವರೆವಿಗೂ ಸದರಿ ಭತ್ಯೆಗಳನ್ನು ನೀಡದಿರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯಲ್ಲಿ ನೀಡಲಾಗುವುದು ?

## ಪದವಿ ಪೂರ್ವ ಕಾಲೇಜಿನ ಬೋಧಕ ಹುದ್ದೆಗಳ ಬಗ್ಗೆ ಮಾಹಿತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೫೧೩ (೭೧೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳ ಸಂಖ್ಯೆ ಎಷ್ಟು ; (ವಿಷಯವಾರು ಮಾಹಿತಿ ನೀಡುವುದು)

(ಆ) ನೇರ ನೇಮಕಾತಿ ಮತ್ತು ಬಡ್ತಿಯಿಂದ ತುಂಬಬೇಕಾಗಿರುವ ಬೋಧಕರ ಹುದ್ದೆಗಳ ಸಂಖ್ಯೆ ಎಷ್ಟು ; (ಪ್ರತ್ಯೇಕವಾಗಿ ವಿವರ ನೀಡುವುದು)

(ಇ) ನೇರ ನೇಮಕಾತಿ ಮತ್ತು ಬಡ್ತಿ ಮೂಲಕ ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಯಾವ ಕಾಲ ಮಿತಿಯಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ?

## ಸರ್ಕಾರಿ ಪದವಿ ಕಾಲೇಜು ಹಾಗೂ ವಿಶ್ವವಿದ್ಯಾನಿಲಯಗಳ ಅತಿಥಿ ಉಪನ್ಯಾಸಕರ ಮಾಹಿತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೫೧೪ (೭೧೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಪದವಿ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳಲ್ಲಿ ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಅನುಸರಿಸಲಾಗುತ್ತಿರುವ ಮಾನದಂಡಗಳೇನು ; (ವಿವರ ನೀಡುವುದು)

(ಆ) ಅತಿಥಿ ಉಪನ್ಯಾಸಕರಿಗೆ ನೀಡಲಾಗುತ್ತಿರುವ ಮಾಸಿಕ ಗೌರವಧನವೆಷ್ಟು ;

(ಇ) ಗೌರವಧನ ಪರಿಷ್ಕರಣೆ ಮಾಡಲು ಸರ್ಕಾರ ಚಿಂತಿಸಿದೆಯೇ ;

(ಈ) ಅತಿಥಿ ಉಪನ್ಯಾಸಕರಾಗಿ ಯು.ಜಿ.ಸಿ ವಿದ್ಯಾರ್ಹತೆ ಹೊಂದಿರುವವರನ್ನು ಸಕ್ರಮಾತಿ ಮಾಡಲು ಸರ್ಕಾರ ಚಿಂತಿಸಿದೆಯೇ ;

(ಉ) ಹಾಗಾದರೆ ಯಾವ ಕಾಲಮಿತಿಯಲ್ಲಿ ಅತಿಥಿ ಉಪನ್ಯಾಸಕರನ್ನು ಸಕ್ರಮಾತಿ ಮಾಡಲಾಗುವುದು ?

## ಸರ್ಕಾರಿ ಪ್ರೌಢಶಾಲೆಗಳ ಮುಖ್ಯ ಶಿಕ್ಷಕರ ಬಗ್ಗೆ ಮಾಹಿತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೫೧೫ (೭೧೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಮುಖ್ಯ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು;

(ಆ) ಯಾವ ಅವಧಿಯಿಂದ ಸದರಿ ಹುದ್ದೆಗಳು ಖಾಲಿ ಇವೆ ;

(ಇ) ಬಡ್ತಿ ಮೂಲಕ ಮತ್ತು ನೇರ ನೇಮಕಾತಿ ಮೂಲಕ ಭರ್ತಿ ಮಾಡಬೇಕಾಗಿರುವ ಮುಖ್ಯ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು;

(ಈ) ಬಡ್ತಿ ಮತ್ತು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಉಂಟಾಗಿರುವ ವಿಳಂಬಕ್ಕೆ ಕಾರಣಗಳೇನು ;

(ಉ) ಯಾವ ಕಾಲಮಿತಿಯಲ್ಲಿ ಬಡ್ತಿ ಮತ್ತು ನೇರ ನೇಮಕಾತಿ ಮೂಲಕ ಸದರಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ?

## ವೈದ್ಯರಾಗಿ ಹೊರ ಬರುತ್ತಿರುವ ಎಂ.ಬಿ.ಬಿ.ಎಸ್ ವಿದ್ಯಾರ್ಥಿಗಳ ಸಂಖ್ಯೆ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೧೬ (೫೧೯) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರತಿ ವರ್ಷ ಎಂ.ಬಿ.ಬಿ.ಎಸ್ ವಿದ್ಯಾಭ್ಯಾಸ ಮುಗಿಸಿ ವೈದ್ಯರಾಗಿ ಹೊರಬರುತ್ತಿರುವ ವೈದ್ಯರ ಸಂಖ್ಯೆಯೆಷ್ಟು; ಪ್ರತಿ ವೈದ್ಯರಿಗೆ ಸರ್ಕಾರ ಖರ್ಚು ಮಾಡುತ್ತಿರುವ ಹಣವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ವೈದ್ಯರು "ಕಡ್ಡಾಯ ಗ್ರಾಮೀಣ ಸೇವೆ" ಯಿಂದ ತಪ್ಪಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ತಪ್ಪಿಸಿಕೊಳ್ಳುತ್ತಿರುವ ವೈದ್ಯರ ಸಂಖ್ಯೆಯೆಷ್ಟು ; ಅಂತಹ ವೈದ್ಯರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಪಂಚಾಯತ್‌ಗಳ ನಮೂನೆ-೯ ಮತ್ತು ನಮೂನೆ-೧೧ಎ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೫೧೭ (೫೨೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಮನಗರ ಜಿಲ್ಲೆ, ಚನ್ನಪಟ್ಟಣದ ಕೆ.ಹೆಚ್.ಬಿ. ಬಡಾವಣೆಯ ನಿವೇಶನ ಮತ್ತು ಮನೆಗಳಿಗೆ ಗ್ರಾಮ ಪಂಚಾಯಿತಿಗಳು ನಮೂನೆ-೯ ಮತ್ತು ನಮೂನೆ-೧೧ಎ ವಿತರಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ದಿನಾಂಕ: ೦೯-೧-೨೦೧೫ರಲ್ಲಿ ಸುತ್ತೋಲೆ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸದರಿ ಬಡಾವಣೆಯನ್ನು ಕರ್ನಾಟಕ ಪುರಸಭೆಗಳ ಕಾಯ್ದೆ ೧೯೬೪ರಂತೆ ಚನ್ನಪಟ್ಟಣ ನಗರಸಭೆಗೆ ಹಸ್ತಾಂತರಿಸದಿದ್ದರೂ ಈ ಸ್ವತ್ತುಗಳಿಗೆ ಕಾನೂನಿನ ಮಾನ್ಯತೆ ಇದೆಯೇ ; (ಮಾಹಿತಿ ನೀಡುವುದು)

(ಇ) ಹಾಗಿದ್ದಲ್ಲಿ, ಈ ಹಿಂದೆ ಇದ್ದಂತೆ ಕೆ.ಹೆಚ್.ಬಿ. ಬಡಾವಣೆಗೆ ಗ್ರಾಮ ಪಂಚಾಯಿತಿಗಳು ನಮೂನೆ-೯ ಮತ್ತು ನಮೂನೆ-೧೧ಎ ವಿತರಿಸಲು ಸರ್ಕಾರಕ್ಕಿರುವ ತೊಂದರೆಗಳೇನು ? (ಮಾಹಿತಿ ನೀಡುವುದು)

# ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರ ಸಮಸ್ಯೆಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ):–**

೫೧೮ (೪೮೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರ ವಿವಿಧ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವಯೋಮಿತಿ ಮೀರಿದ ಮತ್ತು ಮೀರುತ್ತಿರುವ ಅತಿಥಿ ಉಪನ್ಯಾಸಕರಿಗೆ “ಸೇವಾಭದ್ರತೆ” ಒದಗಿಸಲು ಸರ್ಕಾರ ಮುಂದಾಗುವುದೇ ;

(ಇ) ಕಳೆದ ಸದನದಲ್ಲಿ ನೀಡಿದ ಭರವಸೆಯಂತೆ ಸದರಿ ಅತಿಥಿ ಉಪನ್ಯಾಸಕರುಗಳಿಗೆ ಗೌರವಧನವನ್ನು ರೂ. ೨೫.೦೦೦ ಗಳಿಗೆ ಹೆಚ್ಚಿಸಲಾಗಿದೆಯೇ ;

(ಈ) ಹೆಚ್ಚಿಸಿದ್ದಲ್ಲಿ ಯಾವ–ಯಾವ ಜಿಲ್ಲೆಯ ಉಪನ್ಯಾಸಕರುಗಳು ಸದರಿ ಗೌರವಧನ ಪಡೆಯುತ್ತಿದ್ದಾರೆ ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಇಲ್ಲವಾದಲ್ಲಿ ವಿಳಂಭವಾಗಿರುವುದಕ್ಕೆ ಕಾರಣಗಳೇನು ;

(ಊ) ಯಾವ ಕಾಲಮಿತಿಯಲ್ಲಿ ಅತಿಥಿ ಉಪನ್ಯಾಸಕರ ಗೌರವಧನವನ್ನು ಹೆಚ್ಚಿಸಲಾಗುವುದು ?

## ಪ್ರಾಥಮಿಕ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಪದವೀಧರ ಶಿಕ್ಷಕರಿಗೆ ಬಡ್ತಿ ನೀಡುವ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ):–**

೫೯೯ (೪೮೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಪ್ರಾಥಮಿಕ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಪದವೀಧರ ಶಿಕ್ಷಕರ ಸಂಖ್ಯೆ ಎಷ್ಟು ;

(ಆ) ಸದರಿ ಪದವೀಧರ ಶಿಕ್ಷಕರುಗಳಿಗೆ ಬಡ್ತಿ ನೀಡುವಲ್ಲಿ ಸರ್ಕಾರ ವಿಳಂಬ ನೀತಿ ಅನುಸರಿಸುತ್ತಿರಲು ಕಾರಣಗಳೇನು ;

(ಇ) ಸದರಿ ಪದವೀಧರ ಶಿಕ್ಷಕರುಗಳಿಗೆ ಬಡ್ತಿ ನೀಡಿದ್ದಲ್ಲಿ ಉಂಟಾಗುವ ಸಮಸ್ಯೆಗಳೇನು ;

(ಈ) ಯಾವ ಕಾಲಮಿತಿಯಲ್ಲಿ ಸದರಿ ಪದವೀಧರ ಶಿಕ್ಷಕರುಗಳಿಗೆ ಬಡ್ತಿಯನ್ನು ನೀಡಲಾಗುವುದು ?

## ಆಲಮಟ್ಟಿ ಉದ್ಯಾನವನದಲ್ಲಿರುವ "ಸಿಲ್ವರ್‌ಲೇಕ್" ದೋಣಿ ವಿಹಾರದ ಗುತ್ತಿಗೆಯ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ):–**

೫೨೦ (೪೮೭) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆ, ಆಲಮಟ್ಟಿ ಉದ್ಯಾನವನದಲ್ಲಿರುವ ಸಿಲ್ವರ್‌ಲೇಕ್ ದೋಣಿ ವಿಹಾರವನ್ನು ಯಾವ ವರ್ಷದಿಂದ ಪ್ರಾರಂಭಿಸಲಾಗಿದೆ ;

(ಆ) ಸದರಿ ದೋಣಿ ವಿಹಾರವು ಸ್ಥಗಿತಗೊಂಡಿರುತ್ತದೆಯೇ; ಹಾಗಿದ್ದಲ್ಲಿ ಎಷ್ಟು ಕಾಲ ಸ್ಥಗಿತಗೊಂಡಿರುತ್ತದೆ; ಸ್ಥಗಿತಗೊಂಡಿರುವುದಕ್ಕೆ ಕಾರಣಗಳೇನು ;

(ಇ) ಭಾರಿ ಮತ್ತು ಮಧ್ಯಮ ನೀರಾವರಿ ಇಲಾಖೆಯ ವತಿಯಿಂದ ನಿರ್ವಹಿಸಿದಾಗ ದೋಣಿ ವಿಹಾರಕ್ಕೆ ನಿಗದಿಪಡಿಸಿದ ದರ ಎಷ್ಟು; ಮತ್ತು ಗುತ್ತಿಗೆ ನೀಡಿದಾಗಿನ ದರವೆಷ್ಟು ? (ಪ್ರಾರಂಭವಾದಾಗಿನಿಂದ ಇಲ್ಲಿಯವರೆಗೂ ವರ್ಷವಾರು ಸಂಪೂರ್ಣ ವಿವರ ನೀಡುವುದು)

## ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ಮಂಜೂರಾದ ಮತ್ತು ಖಾಲಿಯಿರುವ ಹುದ್ದೆಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ):–**

೫೨೧ (೪೮೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರದಲ್ಲಿರುವ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ಮಂಜೂರಾದ ಒಟ್ಟು ಬೋಧಕ ಮತ್ತು ಬೋಧಕೇತರ ಹುದ್ದೆಗಳೆಷ್ಟು ; ಮತ್ತು ಖಾಲಿಯಿರುವ ಹುದ್ದೆಗಳೆಷ್ಟು; (ಹುದ್ದೆವಾರು ವಿವರ ನೀಡುವುದು)

(ಆ) ಅವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ, ಗುತ್ತಿಗೆ ಮತ್ತು ದಿನಗೂಲಿ ನೌಕರರ ಸಂಖ್ಯೆ ಎಷ್ಟು; (ಹುದ್ದೆವಾರು ಸಂಪೂರ್ಣ ವಿವರ ನೀಡುವುದು)

(ಇ) ಖಾಲಿಯಿರುವ ಹುದ್ದೆಗಳನ್ನು ಯಾವಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು ;

(ಈ) ಸದರಿ ವಿಶ್ವವಿದ್ಯಾಲಯದ ಅಭಿವೃದ್ಧಿಗೆ ಪ್ರಸಕ್ತ ಸಾಲಿನಲ್ಲಿ ಹಮ್ಮಿಕೊಂಡಿರುವ ಕಾರ್ಯಗಳೇನು ;

(ಉ) ಸದರಿ ಯೋಜನೆಗಳಿಗೆ ಎಷ್ಟು ಅನುದಾನವನ್ನು ಮೀಸಲಿಡಲಾಗಿದೆ ;

(ಊ) ಸದರಿ ಅಭಿವೃದ್ಧಿ ಯೋಜನೆಗಳನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ?

## ಬಾದಾಮಿಯಲ್ಲಿನ ಚಾಲುಕ್ಯ ಅಭಿವೃದ್ಧಿ ಪ್ರಾಧಿಕಾರದ ಪ್ರಗತಿ ಕುರಿತು

**ಶ್ರೀ ಎಸ್.ಆರ್. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೨೨ (೪೯೧) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಈ ಹಿಂದಿನ ಸರ್ಕಾರವು ತನ್ನ ಮುಂಗಡ ಪತ್ರದಲ್ಲಿ ಹಂಪಿ ಮಾದರಿಯಂತೆ ಬಾದಾಮಿಯಲ್ಲಿ ಚಾಲುಕ್ಯ ಅಭಿವೃದ್ಧಿ ಪ್ರಾಧಿಕಾರಕ್ಕೆ ಮಂಜೂರಾತಿ ನೀಡಿದ್ದು, ಅದಕ್ಕಾಗಿ ಮೀಸಲಾಗಿಟ್ಟ ಹಣ ಎಷ್ಟು; (ಸಂಪೂರ್ಣ ವಿವರವನ್ನು ಒದಗಿಸುವುದು)

(ಆ) ಚಾಲುಕ್ಯ ಅಭಿವೃದ್ಧಿ ಪ್ರಾಧಿಕಾರವನ್ನು ಅಭಿವೃದ್ಧಿ ಪಡಿಸಲು ಸರ್ಕಾರ ಇಲ್ಲಿಯವರೆಗೆ ಕೈಗೊಂಡ ಕ್ರಮಗಳೇನು ;

(ಇ) ಒಂದು ವೇಳೆ ಚಾಲುಕ್ಯ ಅಭಿವೃದ್ಧಿ ಪ್ರಾಧಿಕಾರವು ಪೂರ್ತಿಯಾಗಿ ಕಾರ್ಯರೂಪಕ್ಕೆ ಬರದೇ ಇದ್ದಲ್ಲಿ ಅದಕ್ಕೆ ಕಾರಣಗಳೇನು ?

## ನಗರ ಕೇಂದ್ರ ಗ್ರಂಥಾಲಯಗಳ ದುರಸ್ತಿ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮ ನಿರ್ದೇಶನ ಹೊಂದಿದವರು):–**

೫೨೩ (೪೯೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯಲ್ಲಿರುವ ವಿಜಯಪುರ ನಗರ ಕೇಂದ್ರ ಗ್ರಂಥಾಲಯವು ಶಿಥಿಲಾವಾಸ್ಥೆಯಲ್ಲಿರುವುದು ಮತ್ತು ಸಿಬ್ಬಂದಿಗಳ ಕೊರತೆಯಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದರ ದುರಸ್ತಿ ಮತ್ತು ಸಿಬ್ಬಂದಿಗಳ ನೇಮಕ ಯಾವಾಗ ಮಾಡಲಾಗುವುದು ;

(ಇ) ವಿಜಯಪುರ ಜಿಲ್ಲೆಯಾದ್ಯಂತ ಇರುವ ನಗರ ಕೇಂದ್ರ ಗ್ರಂಥಾಲಯಗಳ ಸಂಖ್ಯೆ ಎಷ್ಟು ;

(ಈ) ಇವುಗಳಲ್ಲಿ ಸ್ವಂತ ಕಟ್ಟಡವನ್ನು ಹೊಂದಿ ಕಾರ್ಯನಿರ್ವಹಿಸುತ್ತಿರುವ ಗ್ರಂಥಾಲಯಗಳ ಸಂಖ್ಯೆ ಎಷ್ಟು; ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಂಥಾಲಯಗಳ ಸಂಖ್ಯೆ ಎಷ್ಟು ? (ವಿವರ ಒದಗಿಸುವುದು)

## ಆಲಮಟ್ಟಿ ಡ್ಯಾಂ ಎತ್ತರ ಮತ್ತು ಸಂತ್ರಸ್ತರಿಗೆ ಸೌಲಭ್ಯಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):–**

೫೨೪ (೫೦೨) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಲಮಟ್ಟಿ ಡ್ಯಾಂನ ಈಗಿನ ಎತ್ತರವೆಷ್ಟು ;

(ಆ) ರೈತರಿಗೆ ಅನುಕೂಲವಾಗುವ ದೃಷ್ಠಿಯಿಂದ ಆಲಮಟ್ಟಿ ಡ್ಯಾಂನ ಎತ್ತರವನ್ನು ಹೆಚ್ಚಿಸುವ ಉದ್ದೇಶ ಸರ್ಕಾರಕ್ಕಿದೆಯೇ ;

(ಇ) ಈ ಡ್ಯಾಂನ ಎತ್ತರವನ್ನು ಹೆಚ್ಚಿಸಿದ್ದಲ್ಲಿ, ಹಿನ್ನೀರಿನಿಂದ ಮುಳುಗಡೆಯಾಗುವ ಪ್ರದೇಶವೆಷ್ಟು ; ಮುಳುಗಡೆಯಾದ ಪ್ರದೇಶದ ಸಾರ್ವಜನಿಕರಿಗೆ ಪುನರ್ವಸತಿ ಕಲ್ಪಿಸಲು ಸರ್ಕಾರದಿಂದ ಕೈಗೊಂಡ ಕ್ರಮಗಳಾವುವು ? (ವಿವರ ನೀಡುವುದು)

## ಶಿವಮೊಗ್ಗ ಹಾಗೂ ದಾವಣಗೆರೆ ಜಿಲ್ಲೆಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ಕುರಿತು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೫೨೫ (೫೧೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇದುವರೆಗೂ ಶಿವಮೊಗ್ಗ ಹಾಗೂ ದಾವಣಗೆರೆ ಜಿಲ್ಲೆ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕುಗಳಲ್ಲಿ ಮಂಜೂರು ಆಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು; ಕಾರ್ಯಾರಂಭ ಮಾಡಿರುವ ಘಟಕಗಳ ಸಂಖ್ಯೆ ಎಷ್ಟು; ನಿರ್ಮಾಣ ಹಂತದಲ್ಲಿರುವ ಘಟಕಗಳ ಸಂಖ್ಯೆ ಎಷ್ಟು; ಹಾಗೂ ಸದರಿ ಘಟಕಗಳಿಗೆ ಬಿಡುಗಡೆಯಾಗಿರುವ ಮತ್ತು ಖರ್ಚಾದ ಹಾಗೂ ಬಾಕಿ ಇರುವ ಅನುದಾನವೆಷ್ಟು ; (ತಾಲ್ಲೂಕುವಾರು, ಗ್ರಾಮ ಪಂಚಾಯಿತಿವಾರು, ಗ್ರಾಮವಾರು ಪ್ರತಿ ಘಟಕದ ವಿವರ ನೀಡುವುದು)

(ಆ) ಶಿವಮೊಗ್ಗ ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಯೋಜನೆಯಲ್ಲಿ ಎಷ್ಟು ಘಟಕಗಳನ್ನು ಮಂಜೂರು ಮಾಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಇದುವರೆಗೂ ಎಷ್ಟು ಘಟಕಗಳನ್ನು ಸ್ಥಾಪಿಸಲಾಗಿದೆ; ಈ ಘಟಕಗಳಿಗೆ ಬಿಡುಗಡೆಯಾದ ಹಣವೆಷ್ಟು ;

(ಈ) ಇನ್ನುಳಿದ ಘಟಕಗಳ ಸ್ಥಾಪನೆಗೆ ಹಣ ಬಿಡುಗಡೆ ಮಾಡಲಾಗಿದೆಯೇ; ಈ ಘಟಕಗಳನ್ನು ಸ್ಥಾಪಿಸಲು ಬೇಕಾಗುವ ಕಾಲಾವಧಿ ಏನು ;

(ಉ) ಈಗಾಗಲೇ ನಿರ್ಮಿಸಿರುವ ಶುದ್ಧ ಕುಡಿಯುವ ನೀರಿನ ಘಟಕಗಲ್ಲಿ ದುರಸ್ಥಿಗೆ ಎಷ್ಟು ಘಟಕಗಳು ಬಂದಿರುತ್ತವೆ; ಸಂಪೂರ್ಣ ಹಾಳಾಗಿರುವ ಘಟಕಗಳ ಸಂಖ್ಯೆ ಎಷ್ಟು; ದುರಸ್ಥಿಗೆ ಕ್ರಮ ಕೈಗೊಳ್ಳಲು ಪ್ರತ್ಯೇಕ ಜಿಲ್ಲಾವಾರು ಘಟಕಗಳನ್ನು ರಚಿಸಲಾಗಿದೆಯೇ ?

## ರಾಜ್ಯದಲ್ಲಿ ಸಾರ್ವಜನಿಕ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆಯಿರುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ):–**

೫೨೬ (೬೮೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಾರ್ವಜನಿಕ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆಯಿಂದ ರೋಗಿಗಳಿಗೆ ಸಕಾಲದಲ್ಲಿ ಸರಿಯಾದ ಚಿಕಿತ್ಸೆ ಲಭ್ಯವಾಗದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಹಾಲಿ ವೈದ್ಯರ ಕೊರತೆ ಎಷ್ಟಿದೇ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ವೈದ್ಯರ ಕೊರತೆ ನೀಗಿಸಲು ಸರ್ಕಾರ ಇದುವರೆಗೂ ಯಾವ ಕ್ರಮ ಕೈಗೊಂಡಿದೆ ?

## ರಾಜ್ಯದಲ್ಲಿ ಸರ್ಕಾರಿ ಅನುದಾನಿತ ಮತ್ತು ಅನುದಾನ ರಹಿತ ಪ್ರೌಢ ಶಾಲೆಗಳ ಸಂಖ್ಯೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ):–**

೫೨೭ (೫೧೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಅನುದಾನಿತ ಮತ್ತು ಅನುದಾನರಹಿತ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಶಾಲೆಗಳಲ್ಲಿ ಆಟದ ಮೈದಾನ ಹೊಂದಿರುವ ಶಾಲೆಗಳ ಸಂಖ್ಯೆ ಎಷ್ಟು ;

(ಇ) ಸದರಿ ಶಾಲೆಗಳಲ್ಲಿ ದೈಹಿಕ ಶಿಕ್ಷಕರು ಇರುವ ಶಾಲೆಗಳ ಸಂಖ್ಯೆ ಎಷ್ಟು ; (ಸರ್ಕಾರಿ ಅನುದಾನಿತ, ಅನುದಾನ ರಹಿತ ಪ್ರತ್ಯೇಕವಾಗಿ ವಿವರ ನೀಡುವುದು)

(ಈ) ಆಟದ ಮೈದಾನ ಇಲ್ಲದ ಶಾಲೆಗಳ ವಿದ್ಯಾರ್ಥಿಗಳ ದೈಹಿಕ ಸಾಮರ್ಥ್ಯ ಕುಂಠಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಆಟದ ಮೈದಾನದ ಕೊರತೆ ನೀಗಿಸಲು ಸರ್ಕಾರ ಕೈಗೊಂಡ ಹಾಗೂ ಕೈಗೊಳ್ಳುವ ಕ್ರಮಗಳೇನು ? (ವಿವರ ನೀಡುವುದು)

# ಹೆಚ್ಚಿನ ಜನಸಂಖ್ಯೆ ಹಾಗೂ ವಿಸ್ತೀರ್ಣಗಳ್ಳುಳ್ಳ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ):–**

೫೨೮ (೫೧೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೆಚ್ಚಿನ ಜನಸಂಖ್ಯೆ ಹಾಗೂ ವಿಸ್ತೀರ್ಣಗಳ್ಳುಳ್ಳ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೆಗೆ ಏರಿಸಲು ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಶಿವಮೊಗ್ಗ ಜಿಲ್ಲೆಯ ಹಲವಾರು ಗ್ರಾಮ ಪಂಚಾಯಿತಿಗಳು ಹೆಚ್ಚಿನ ಜನಸಂಖ್ಯೆ ಹೊಂದಿದ್ದು, ವಿಸ್ತೀರ್ಣವು ಹೆಚ್ಚಿದ್ದು, (ಉದಾಹರಣೆಗೆ ಭದ್ರಾವತಿ ತಾಲ್ಲೂಕಿನ ಹೊಳೆಹೊನ್ನೂರು ಗ್ರಾಮ ಪಂಚಾಯಿತಿ ಹೊಸನಗರ ತಾಲ್ಲೂಕಿನ ರಿಪ್ಪನ್‌ಪೇಟೆ ಗ್ರಾಮ ಪಂಚಾಯಿತಿಗಳಾಗಿ ಸೊರಬ ತಾಲ್ಲೂಕಿನ ಆನವಟ್ಟಿ ಗ್ರಾಮ ಪಂಚಾಯಿತಿ) ಇವುಗಳನ್ನು ಪಟ್ಟಣ ಪಂಚಾಯಿತಿಗಳಾಗಿ ಮೇಲ್ದರ್ಜೆಗೆ ಏರಿಸಿ ಅಲ್ಲಿನ ನಾಗರೀಕರಿಗೆ ಹೆಚ್ಚಿನ ಸೌಲಭ್ಯ ಕೊಡುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುತ್ತಿದೆಯೇ ;

(ಇ) ಇದೇ ರೀತಿ ರಾಜ್ಯದ ಹಲವಾರು ಗ್ರಾಮ ಪಂಚಾಯಿತಿಗಳು ಪಟ್ಟಣ ಪಂಚಾಯಿತಿಯಾಗಿ ಪರಿವರ್ತನೆಯಾಗಲು ಎಲ್ಲಾ ಸೌಲಭ್ಯಗಳನ್ನು ಹೊಂದಿರುವುದರಿಂದ ಸರ್ಕಾರ ಈ ಬಗ್ಗೆ ಗಮನ ಹರಿಸಿ ಹೆಚ್ಚಿನ ಅನುದಾನವನ್ನು ನಿಗದಿ ಮಾಡಿ ಈ ಬಗ್ಗೆ ಸೂಕ್ತ ನಿರ್ಧಾರ ಕೈಗೊಳ್ಳುವುದೇ ? (ವಿವರವಾದ ಮಾಹಿತಿ ನೀಡುವುದು)

## ಬೆಂಗಳೂರು ವಿಶ್ವವಿದ್ಯಾಲಯದ ದೃಶ್ಯ ಕಲಾವಿಭಾಗದ ಅರ್ಹ ಖಾಯಂ ಅಧ್ಯಾಪಕರಿಲ್ಲದಿರುವ ಬಗ್ಗೆ

**ಶ್ರೀ ಹೆಚ್. ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೯ (೫೨೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ವಿಶ್ವವಿದ್ಯಾಲಯ ದೃಶ್ಯ ಕಲಾವಿಭಾಗದ (ವಿಶುಯಲ್ ಆರ್ಟ್ಸ್) ಅರ್ಹ ಖಾಯಂ ಅಧ್ಯಾಪಕರಿಲ್ಲದೇ ಪಿ.ಹೆಚ್.ಡಿ. ಮಾರ್ಗದರ್ಶನ ಮತ್ತು ಸಂಶೋಧನಾ ಕಾರ್ಯ ನಡೆಯದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಬಗ್ಗೆ ವಿಶ್ವವಿದ್ಯಾಲಯ/ ಸರ್ಕಾರ ಏನು ಕ್ರಮ ಕೈಗೊಂಡಿದೆ;

(ಇ) ಈ ವಿಭಾಗಗಳಲ್ಲಿ ವಿದ್ಯಾರ್ಥಿಗಳಿಗೆ ವೇಳಾ ಪಟ್ಟಿಯನ್ನು ನೀಡದೆ ತರಗತಿಯನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಈ ವಿಭಾಗದಲ್ಲಿ ಎಲ್ಲಾ ಕೋರ್ಸ್‌ಗಳಿಗೆ ಸಂಬಂಧಿಸಿದ ವೇಳಾಪಟ್ಟಿಯನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಭಾವಣಿ ಕುಸಿತ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೩೦ (೭೧೪) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಸರ್ಕಾರಿ ಮೆಡಿಕಲ್ ಕಾಲೇಜಿನ ಬೋಧಕ ಆಸ್ಪತ್ರೆಯ ಹೊಸ ಕಟ್ಟಡ ಛಾವಣಿ ಕುಸಿತ ಪ್ರಕರಣ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ೨೦೧೭ರ ಆಗಸ್ಟ್‌ನಲ್ಲಿ ಉದ್ಘಾಟನೆಗೊಂಡ ಆಸ್ಪತ್ರೆಯ ಹೊಸ ಕಟ್ಟಡದ ಛಾವಣಿ ಕುಸಿತಕ್ಕೆ ಕಾರಣವೇನು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕಟ್ಟಡ ನಿರ್ಮಾಣದಲ್ಲಿ ಕಳಪೆ ಕಾಮಗಾರಿ ಇಂಜೀನಿಯರ್/ ಗುತ್ತಿಗೆದಾರರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆಯೇ ? (ಸ್ಪಷ್ಟ ಮಾಹಿತಿ ನೀಡುವುದು)

## ವೈದ್ಯಕೀಯ ಸೀಟುಗಳ ಕುರಿತು

**ಶ್ರೀ ರವಿಕುಮಾರ್. ಎನ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೩೧ (೪೯೬) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೮–೧೯ನೇ ಸಾಲಿನಲ್ಲಿ ಪ್ರವೇಶ ಪ್ರಕ್ರಿಯೆ ಮುಗಿದ ನಂತರ ಉಳಿದ ೪೬೬ ವೈದ್ಯಕೀಯ ಸೀಟುಗಳನ್ನು ಯಾವ ಯಾವ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿಗೆ ಹಿಂತಿರುಗಿಸಲಾಗಿದೆ; (ಕಾಲೇಜುವಾರು ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಉಳಿದ ೪೬೬ ವೈದ್ಯಕೀಯು ಸೀಟುಗಳನ್ನು ಯಾವ ವಿದ್ಯಾರ್ಥಿಗಳಿಂದ ಭರ್ತಿ ಮಾಡಿಕೊಳ್ಳಲಾಗಿದೆ; ಈ ವಿದ್ಯಾರ್ಥಿಗಳಲ್ಲಿ ರಾಜ್ಯದ ವಿದ್ಯಾರ್ಥಿಗಳೆಷ್ಟು; ಅನ್ಯ ರಾಜ್ಯದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ಅವರು ಗಳಿಸಿದ ನೀಟ್ ರ್‍ಯಾಂಕ್ ಮತ್ತು ಅಂಕಗಳೊಂದಿಗೆ ಯಾವ ವೈದ್ಯಕೀಯ ಶಿಕ್ಷಣ ಸಂಸ್ಥೆಯಲ್ಲಿ ಸೀಟು ಪಡೆದಿರುತ್ತಾರೆ ಎಂಬ ಕುರಿತು ಮಾಹಿತಿ ನೀಡುವುದು)

(ಇ) ೨೦೧೮–೧೯ನೇ ಸಾಲಿನಲ್ಲಿ ವೈದ್ಯಕೀಯ ಪ್ರವೇಶಕ್ಕಾಗಿ ಸಂದರ್ಶನಕ್ಕೆ ಹಾಜರಾಗಿರುವ ಯಾವ ರ್‍ಯಾಂಕಿನ ವಿದ್ಯಾರ್ಥಿಯವರೆಗೆ ಪ್ರವೇಶ ದೊರಕಿದೆ; SC/ST, OBC, GNL ಅಭ್ಯರ್ಥಿಗಳಲ್ಲಿ ಯಾವ ರ್‍ಯಾಂಕಿನ ಅಭ್ಯರ್ಥಿಯವರೆಗೆ ಪ್ರವೇಶಾವಕಾಶ ದೊರಕಿದೆ;

(ಈ) ೨೦೧೮–೧೯ನೇ ಸಾಲಿನಲ್ಲಿ ಪ್ರವೇಶ ಪ್ರಕ್ರಿಯೆ ಮುಗಿದ ನಂತರ ಉಳಿದ ೪೬೬ ವೈದ್ಯಕೀಯ ಸೀಟುಗಳನ್ನು ಆಡಳಿತ ಮಂಡಳಿಗೆ ಹಿಂತಿರುಗಿಸಿದ ಬಳಿಕ ಯಾವ ರ್‍ಯಾಂಕಿನ ವಿದ್ಯಾರ್ಥಿವರೆಗೆ ಪ್ರವೇಶಾವಕಾಶ ದೊರಕಿದೆ; SC/ST, OBC, GNL ಅಭ್ಯರ್ಥಿಗಳಲ್ಲಿ ಯಾವ ರ್‍ಯಾಂಕಿನ ಅಭ್ಯರ್ಥಿಯವರೆಗೆ ಪ್ರವೇಶಾವಕಾಶ ದೊರಕಿದೆ ?

## ಶಾಲೆಗಳಿಗೆ ಅಕ್ಕಿ ಬೇಳೆಗಳನ್ನು ನೀಡದಿರುವ ಕುರಿತು

**ಶ್ರೀ ರವಿಕುಮಾರ್. ಎನ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೩೨ (೪೯೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಾಲೆಗಳು ಪ್ರಾರಂಭವಾಗಿ ತಿಂಗಳುಗಳೇ ಕಳೆದರೂ ಇದುವರೆವಿಗೂ ಅಕ್ಷರ ದಾಸೋಹಕ್ಕೆ ಅಕ್ಕಿ, ಬೇಳೆಯನ್ನು ಶಾಲೆಗಳಿಗೆ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ೨೦೧೯–೨೦ರ ಶೈಕ್ಷಣಿಕ ಸಾಲಿನಿಂದ ಅಕ್ಷರ ದಾಸೋಹವನ್ನು ನಿಲ್ಲಿಸುವ ಯೋಚನೆ ಸರ್ಕಾರದ ಮಟ್ಟದಲ್ಲಿದೆಯೇ;

(ಆ) ಶಾಲೆಗಳು ಪ್ರಾರಂಭವಾಗಿ ತಿಂಗಳುಗಳೇ ಕಳೆದರೂ ೨೦೧೯–೨೦ನೇ ಶೈಕ್ಷಣಿಕ ಸಾಲಿನಲ್ಲಿ ಮಕ್ಕಳ ಅಕ್ಷರ

ದಾಸೋಹಕ್ಕಾಗಿ ಅಕ್ಕಿ ಬೇಳೆ ಸರಬರಾಜು ಮಾಡಲು ಟೆಂಡರ್ ಕರೆಯದಿರಲು ಕಾರಣವೇನು; ಶಾಲೆಗಳಿಗೆ ಕಳೆದ ೩ ತಿಂಗಳಿನಿಂದ ಪಡಿತರ ನೀಡದಿರಲು ಕಾರಣವೇನು;

(ಇ) ರೈತ ಪರ ಎನ್ನುವ ಸರ್ಕಾರವು ರೈತರ ಮಕ್ಕಳನ್ನು ಉಪವಾಸ ಕೆಡುವುತ್ತಿರುವ ಬಗ್ಗೆ ಸರ್ಕಾರದ ನಿಲುವೇನು; ಶಾಲೆಗಳಿಗೆ ಅಕ್ಕಿ ಮತ್ತು ಬೇಳೆ ಸರಬರಾಜು ಮಾಡಲು ಯಾವ ಕಾಲಮಿತಿಯೊಳಗೆ ಟೆಂಡರ್ ಕರೆಯಲಾಗುವುದು ?

## ಇಂಜಿನಿಯರಿಂಗ್ ಕಾಲೇಜುಗಳ ಕುರಿತು

**ಶ್ರೀ ರವಿಕುಮಾರ್. ಎನ್ (ವಿಧಾನಸಭೆಯಿಂದ ಚುನಾಯಿತರಾದವರು):–**

೫೩೩ (೪೯೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇಂಜಿನಿಯರಿಂಗ್ ಕಾಲೇಜನ್ನು ಪ್ರಾರಂಭಿಸಲು ಇರಬೇಕಾದ ಕನಿಷ್ಟ ಮೂಲಭೂತ ಸೌಕರ್ಯಗಳೇನು; ಕಾಲೇಜನ್ನು ಪ್ರಾರಂಭಿಸಲು ಇರಬೇಕಾದ ಜಾಗದ ಬಗ್ಗೆ ಇರುವ ನಿಯಮಗಳೇನು;

(ಆ) ಬೆಂಗಳೂರು ನಗರ ಜಿಲ್ಲೆಯ ಬೆಂಗಳೂರು ದಕ್ಷಿಣ ತಾಲ್ಲೂಕಿನ ಬೇಗೂರು ಹೋಬಳಿಯ ಹುಳಿಮಾವು ಗ್ರಾಮದ ಸರ್ವೇ ನಂ.೬೩ರ ಒತ್ತುವರಿ ಮಾಡಿಕೊಂಡಿರುವ ೫ ಎಕರೆ ಸ್ಥಳದಲ್ಲಿ ತಾಂತ್ರಿಕ ಶಿಕ್ಷಣ ಸಂಸ್ಥೆಯನ್ನು ಪ್ರಾರಂಭಿಸಲು ಅನುಮತಿ ನೀಡಿದವರು ಯಾರು;

(ಇ) ಇಸ್ಲಾಮಿಯಾ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜನ್ನು ಆರಂಭಿಸಲು ಸಲ್ಲಿಸಿರುವ ದಾಖಲೆಗಳಲ್ಲಿ ಈ ಕಾಲೇಜು

ಹೊಂದಿರುವ ಅಥವಾ ಬಳಸಿಕೊಳ್ಳುತ್ತಿರುವ ಜಾಗದ ಕುರಿತು ಯಾವ ರೀತಿಯ ಮಾಹಿತಿಯನ್ನು ನೀಡಿದೆ; ಈ ಮಾಹಿತಿಯನ್ನು ಪರಿಶೀಲಿಸಿ ದೃಢೀಕರಿಸಿದ ಅಧಿಕಾರಿ ಯಾರು ?

## ವೈದ್ಯಕೀಯ ಕಾಲೇಜುಗಳಲ್ಲಿ ಭರ್ತಿಯಾಗದಿರುವ ಸೀಟುಗಳ ಕುರಿತು

**ಶ್ರೀ ರವಿಕುಮಾರ್. ಎನ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೫೩೪ (೪೯೭) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೮–೧೯ನೇ ಶೈಕ್ಷಣಿಕ ವರ್ಷದ ಸಾಲಿನ ವೈದ್ಯಕೀಯ ಶಿಕ್ಷಣ ಕಾಲೇಜುಗಳ ಪ್ರವೇಶ ಪ್ರಕ್ರಿಯೆ ಮುಗಿದ ಬಳಿಕ ಯಾವ ಯಾವ ಕಾಲೇಜುಗಳಲ್ಲಿ ಸರ್ಕಾರದ ಲೆಕ್ಕದಲ್ಲಿನ ಸೀಟುಗಳು ಭರ್ತಿಯಾಗದೆ ಉಳಿದಿರುತ್ತದೆ; ಈ ಸೀಟುಗಳು ಯಾವ ವರ್ಗಕ್ಕೆ ಸೇರಿದವುಗಳಾಗಿದೆ; ಇದರಲ್ಲಿ ಸಾಮಾನ್ಯ ವರ್ಗಕ್ಕೆ ಸೇರಿದ ಸೀಟುಗಳ ಸಂಖ್ಯೆ ಎಷ್ಟು; (ಕಾಲೇಜುವಾರು ಜಿಲ್ಲಾವಾರು ವಿವರ ನೀಡುವುದು)

(ಆ) ೨೦೧೮–೧೯ನೇ ಶೈಕ್ಷಣಿಕ ವರ್ಷದ ಸಾಲಿನಲ್ಲಿ ಎನ್.ಆರ್.ಐ. ಕೋಟಾದ ಎಷ್ಟು ಸೀಟುಗಳನ್ನು ಸರ್ಕಾರಕ್ಕೆ ವೈದ್ಯಕೀಯ ಶಿಕ್ಷಣ ಕಾಲೇಜುಗಳು ಬಿಟ್ಟು ಕೊಟ್ಟಿದ್ದವು; ಇವುಗಳಲ್ಲಿ ಎಷ್ಟು ಸೀಟುಗಳನ್ನು ಸರ್ಕಾರ ಭರ್ತಿ ಮಾಡಿತ್ತು; ವೈದ್ಯಕೀಯ ಕಾಲೇಜುಗಳ ಆಡಳಿತ ಮಂಡಳಿಗೆ ಸರ್ಕಾರ ಹಿಂತಿರುಗಿಸಿದ ಸೀಟುಗಳ ಸಂಖ್ಯೆ ಎಷ್ಟು; (ಕಾಲೇಜುವಾರು ಜಿಲ್ಲಾವಾರು ವಿವರ ನೀಡುವುದು)

(ಇ) ೨೦೧೮–೧೯ನೇ ಸಾಲಿನಲ್ಲಿ ವೈದ್ಯಕೀಯ ಶಿಕ್ಷಣ ಕಾಲೇಜುಗಳ ಪ್ರವೇಶ ಪ್ರಕ್ರಿಯೆ ಮುಗಿಯಲು ಸರ್ಕಾರವು ನಿಗಧಿಪಡಿಸಿದ ಕೊನೆಯ ದಿನಾಂಕ ಯಾವುದು; ಪ್ರವೇಶ ಪ್ರಕ್ರಿಯೆ ಮುಗಿದ

ಬಳಿಕ ಸರ್ಕಾರ ಹಿಂತಿರುಗಿಸಿದ ಸೀಟುಗಳನ್ನು ಆಡಳಿತ ಮಂಡಳಿಯವರು ಭರ್ತಿ ಮಾಡಲು ನಿಗಧಿಪಡಿಸಿದ ಕೊನೆಯ ದಿನಾಂಕ ಯಾವುದು ?

## ಹೊಸ ವೈದ್ಯಕೀಯ ಕಾಲೇಜುಗಳ ಕುರಿತು

**ಶ್ರೀ ರವಿಕುಮಾರ್. ಎನ್ (ವಿಧಾನಸಭೆಯಿಂದ ಚುನಾಯಿತರಾದವರು):–**

೫೩೫ (೪೯೮) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ನೇ ಸಾಲಿನ ಆಯುವ್ಯಯದಲ್ಲಿ ಘೋಷಣೆ ಮಾಡಲಾದಂತೆ ಎಷ್ಟು ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲಾಗಿದೆ;

(ಆ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಬೇಕಾಗಿರುವ ಎಲ್ಲಾ ಮೂಲಭೂತ ಸೌಲಭ್ಯಗಳು ಇದ್ದರೂ ಇರುವರೆಗೂ ಸರ್ಕಾರಿ ವೈದ್ಯಕೀಯ ಕಾಲೇಜು ಪ್ರಾರಂಭಿಸದಿರಲು ಕಾರಣವೇನು; ಸರ್ಕಾರಿ ಖಾಸಗಿ ವೈದ್ಯಕೀಯ ಶಿಕ್ಷಣ ಸಂಸ್ಥೆಗಳ ಲಾಭಿಗೆ ಮಣಿದಿದೆಯೇ; ಈ ಕುರಿತು ಸರ್ಕಾರದ ನಿಲುವೇನು;

(ಇ) ಚಿಕ್ಕಮಗಳೂರು ಜಿಲ್ಲೆಯು ಮಲೆನಾಡಿನ ಪ್ರದೇಶವಾಗಿದ್ದು, ಈ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಯಾವ ಕಾಲಮಿತಿಯೊಳಗೆ ಪ್ರಾರಂಭಿಸಲಾಗುವುದು;

(ಈ) ೨೦೧೯–೨೦ನೇ ಶೈಕ್ಷಣಿಕ ಸಾಲಿನಲ್ಲಿ ಎಷ್ಟು ವೈದ್ಯಕೀಯ ಸೀಟುಗಳು ಲಭ್ಯವಿದೆ; ಇದರಲ್ಲಿ ಎನ್.ಆರ್.ಐ ಸೀಟುಗಳೆಷ್ಟು; ನೀಟ್ ಪರೀಕ್ಷೆಯ ಮೂಲಕ ತುಂಬಬಹುದಾದ ಸೀಟುಗಳೆಷ್ಟು; ಆಡಳಿತ ಮಂಡಳಿಯ ಸೀಟುಗಳೆಷ್ಟು; ಸರ್ಕಾರಿ ಸೀಟುಗಳೆಷ್ಟು ? (ಕಾಲೇಜುವಾರು ವಿವರ ನೀಡುವುದು)

## ರಾಜ್ಯದಲ್ಲಿ ಅಂತರ್ಜಲ ಸ್ಥಿತಿಗತಿಗಳ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು):–**

೫೩೬ (೭೨೨) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಅಂತರ್ಜಲ ಸ್ಥಿತಿಗತಿಗಳ ಬಗ್ಗೆ ಸರ್ಕಾರದ ಮಟ್ಟದಲ್ಲಿ ಮಾಹಿತಿ ಇದೆಯೇ ;

(ಆ) ಇದ್ದಲ್ಲಿ ೧೦ ವರ್ಷಗಳಲ್ಲಿ ರಾಜ್ಯದ ಅಂತರ್ಜಲ ಕುಸಿದಿರುವ ಪ್ರಮಾಣದ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು;

(ಇ) ರಾಜ್ಯದ ನಗರ ಪ್ರದೇಶಗಳು ಹಾಗೂ ಗ್ರಾಮೀಣ ಪ್ರದೇಶಗಳ ಕುಡಿಯುವ ನೀರಿನ ಮೂಲವಾಗಿ ಕೊಳವೆ ಬಾವಿಗಳ ಮೇಲೆ ಶೇಕಡವಾರು ಎಷ್ಟು ಜನ ಅವಲಂಬಿಸಿದ್ದಾರೆ; (ಗ್ರಾಮಗಳ/ನಗರಗಳ ಬಗ್ಗೆ ಮಾಹಿತಿ ನೀಡುವುದು)

(ಈ) ಜಿಲ್ಲಾವಾರು ಅಂತರ್ಜಲ ಮಳೆನೀರು ಕೊಯ್ಲು ಹಾಗೂ ಇತರೆ ಭೂಗೋಳ ನಿರ್ಮಾಣ (Geo- Structure) ಬಗ್ಗೆ ವರದಿ ಸರ್ಕಾರದಲ್ಲಿ ಇದೆಯೇ; ಇದ್ದಲ್ಲಿ ಅದರ ವರದಿ ನೀಡುವುದು;

(ಉ) ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಅಂತರ್ಜಲದ ನೀರು ಕಲುಷಿವಾಗಿರುವ (Contamination) ಬಗ್ಗೆ ಮಾಹಿತಿ ಇದೆ;

(ಊ) ಇದ್ದಲ್ಲಿ ಜಿಲ್ಲಾವಾರು, ಹೋಬಳಿ ಮತ್ತು ಗ್ರಾಮವಾರು ಮಾಹಿತಿ ನೀಡುವುದು ಇದನ್ನು ಸರಿಪಡಿಸಲು ಸರ್ಕಾರವು ತೆಗೆದುಕೊಂಡ ಕ್ರಮವೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಬೆಂಗಳೂರು ಕನ್ನಡ ಸಂಸ್ಕೃತಿ ಇಲಾಖೆಯಿಂದ ಆಚರಿಸುವ ಜಯಂತಿಗಳ ಬಗ್ಗೆ

**ಶ್ರೀ ಜಿ.ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೩೭ (೫೨೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಪ್ರತಿವರ್ಷ ರಾಜ್ಯದಲ್ಲೆಡೆ ಆಚರಿಸುವ ಜಯಂತಿಗಳು ಎಷ್ಟು; ಅದಕ್ಕೆ ಇಲಾಖೆ ವತಿಯಿಂದ ಖರ್ಚು ಮಾಡುವ ಅನುದಾನ ಎಷ್ಟು; (ಮಾಹಿತಿ ಒದಗಿಸುವುದು)

(ಆ) ಕನ್ನಡ ಸಂಸ್ಕೃತಿ ಇಲಾಖೆಯಿಂದ ಆಚರಣೆ ಆಗುವ ಜಯಂತಿಗಳಲ್ಲಿ ಮುಖ್ಯಮಂತ್ರಿಗಳು ಉಪಮುಖ್ಯಮಂತ್ರಿಗಳು ಹಾಗೂ ಸಚಿವರು ಎಷ್ಟು ಜಯಂತಿಗಳಲ್ಲಿ ಪಾಲ್ಗೊಂಡಿದ್ದಾರೆ ? (ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿರುವ ಆಯುರ್ವೇದ ಕೇಂದ್ರಗಳ ಮತ್ತು ಆಯುರ್ವೇದ ವೈದ್ಯರುಗಳ ಕರಿತು.

**ಶ್ರೀ ಎಸ್. ವ್ಹಿ ಸಂಕನೂರ (ಪದವೀಧರರ ಕ್ಷೇತ್ರ) :–**

೫೩೮ (೭೧೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅನುದಾನದಲ್ಲಿ ಎಷ್ಟು ಆಯುರ್ವೇದ ಸಂಶೋಧನಾ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ; ಮತ್ತು ಇವು ಯಾವ ಯಾವ ಸ್ಥಳಗಳಲ್ಲಿವೆ;

(ಆ) ಪ್ರತಿಯೊಂದು ಸಂಶೋಧನಾ ಕೇಂದ್ರದಲ್ಲಿ ಎಷ್ಟು ಜನ ಸಂಶೋಧಕರು ಮತ್ತು ಇತರೆ ಸಿಬ್ಬಂದಿ ಕಾರ್ಯ ನಿರ್ವಹಿಸುತ್ತಿದ್ದಾರೆ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಪ್ರತಿಯೊಂದು ಸಂಶೋಧನಾ ಕೇಂದ್ರಕ್ಕೆ ಕಳೆದ ೩ ವರ್ಷಗಳಲ್ಲಿ ಸಿಬ್ಬಂದಿ ಹಾಗೂ ಸಂಶೋಧನೆಗಾಗಿ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ; (ಪ್ರತ್ಯೇಕವಾಗಿ ಮಾಹಿತಿ ನೀಡುವುದು) ರಾಜ್ಯದ ಪ್ರತಿಯೊಂದು ಜಿಲ್ಲೆಯಲ್ಲಿ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರದಿಂದ ನೇಮಕಗೊಂಡು ಎಷ್ಟು ಜನ ಆಯುರ್ವೇದ ವೈದ್ಯರು (B.A.M.S ಹಾಗೂ M.D) ಕಾರ್ಯ ನಿರ್ವಹಿಸುತ್ತಿದ್ದಾರೆ ? ಜಿಲ್ಲಾ ಹಾಗೂ ತಾಲ್ಲೂಕುವಾರು ಮಾಹಿತಿ ನೀಡುವುದು)

## ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಲ್ಲಿ "ವೃತ್ತಿ ಮಾರ್ಗದರ್ಶನ ಸೇವಾ ನಿಧಿ" ಹೆಸರಿನಲ್ಲಿ ಹಣ ವಸೂಲಿ ಮಾಡುತ್ತಿರುವ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೫೩೯ (೭೧೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಮೈಸೂರು, ಬೆಂಗಳೂರು ಕರ್ನಾಟಕ ಗುಲ್ಬರ್ಗಾ, ಶಿವಮೊಗ್ಗ ರಾಣಿ ಚೆನ್ನಮ್ಮ ಮುಂತಾದ ವಿಶ್ವವಿದ್ಯಾಲಯಗಳಲ್ಲಿ ಪದವಿ ಅಧ್ಯಯನ ಮಾಡುವ ವಿದ್ಯಾರ್ಥಿಗಳಿಂದ "ವೃತ್ತಿ ಮಾರ್ಗದರ್ಶನ ಸೇವಾ ನಿಧಿ" (Career Guidance Service fund) ಎಂಬ ಹೆಸರಿನ ಹಣ ವಸೂಲಿ ಮಾಡಲಾಗುತ್ತಿದೆಯೇ ; ಹಾಗಿದ್ದಲ್ಲಿ, ಪ್ರತಿ ವಿದ್ಯಾರ್ಥಿಯಿಂದ ಎಷ್ಟು ಹಣ ವಸೂಲಿ ಮಾಡಲಾಗುತ್ತಿದೆ ;

(ಆ) ಕಳೆದ ೫ ವರ್ಷಗಳಲ್ಲಿ ಪ್ರತಿ ವಿಶ್ವವಿದ್ಯಾಲಯದಲ್ಲಿ ಈ ರೀತಿ ಸಂಗ್ರಹ ಮಾಡಿದ ಒಟ್ಟು ಹಣ ಎಷ್ಟು ; (ವಿಶ್ವವಿದ್ಯಾಲಯವಾರು ಮಾಹಿತಿ ನೀಡುವುದು)

(ಇ) ಹೀಗೆ ಸಂಗ್ರಹವಾದ ಹಣದಲ್ಲಿ ಪ್ರತಿ ವಿಶ್ವವಿದ್ಯಾಲಯದವರು ವಿದ್ಯಾರ್ಥಿಗಳಿಗೆ ವೃತ್ತಿ ತರಬೇತಿ ನೀಡಲು ಎಷ್ಟು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವರು ; ಇದಕ್ಕೆ ಖರ್ಚಾದ ಹಣವೆಷ್ಟು ? (ಈ ಕುರಿತು ಪ್ರತಿ ವಿಶ್ವವಿದ್ಯಾಲಯವಾರು ಮಾಹಿತಿ ನೀಡುವುದು)

## JOC ಯಿಂದ ವಿವಿಧ ಇಲಾಖೆಗಳಿಗೆ ವಿಲೀನಗೊಂಡ ಸಿಬ್ಬಂದಿಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೫೪೦ (೬೭೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪದವಿ ಪೂರ್ವ ಶಿಕ್ಷಣದ ಜೆಓಸಿ (JOC) ಯಿಂದ ವಿವಿಧ ಇಲಾಖೆಗಳಲ್ಲಿ ಸೇವಾ ವಿಲೀನಗೊಂಡ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಯಾವಾಗ ವಿಲೀನಗೊಂಡಿದ್ದಾರೆ ;

(ಆ) ವಿಲೀನಗೊಳ್ಳುವ ಪೂರ್ವದಲ್ಲೇ ಈ ಸಿಬ್ಬಂದಿಗಳು (JOC) ಯಲ್ಲಿ ಸೇವೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ವಿಲೀನ ಪೂರ್ವ ಸೇವೆಯನ್ನು ಪರಿಗಣಿಸಿ ಪಿಂಚಣಿ ಸೌಲಭ್ಯವನ್ನು ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಖಾಸಗಿ ಅನುದಾನಿತ ಶಾಲಾ ಕಾಲೇಜುಗಳ ಸಿಬ್ಬಂದಿಗಳ ಪಿಂಚಣಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೫೪೧ (೬೮೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಖಾಸಗಿ ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೇತನಾನುದಾನಕ್ಕೆ ಒಳಪಟ್ಟ (೦೧–೦೪–೨೦೦೬ರ ನಂತರ) ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳೆಷ್ಟು ;

(ಆ) ಸದರಿ ಸಿಬ್ಬಂದಿಗಳಿಗೆ ರಾಜ್ಯ ಸರ್ಕಾರಿ ನೌಕರರಿಗೆ ದೊರೆಯುವಂತಹ N.P.S (ನೂತನ ಪಿಂಚಣಿ ಯೋಜನೆ) ಸೌಲಭ್ಯ ದೊರೆಯದೆ ಇರುವುದು ಸರ್ಕಾರದ ಗಮನದಲ್ಲಿ ಇದೆಯೇ ;

(ಇ) ಈ ಸಿಬ್ಬಂದಿಗಳಿಗೆ N.P.S ಪಿಂಚಣಿ ಯೋಜನೆ ದೊರಕಿಸುವಲ್ಲಿ ಸರ್ಕಾರ ಗಂಭೀರವಾಗಿ ಪರಿಗಣಿಸುವುದೇ ;

(ಈ) ಈ ಬಗ್ಗೆ ಸರ್ಕಾರ ಕೈಗೊಂಡ ಅಗತ್ಯ ಕ್ರಮಗಳೇನು ?

## ಖಾಸಗಿ ಶಾಲಾ ಕಾಲೇಜುಗಳ ವೇತನಾನುದಾನ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೫೪೨ (೬೮೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಖಾಸಗಿ ಪ್ರಾಥಮಿಕ ಮತ್ತು ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳನ್ನು ಯಾವ ವರ್ಷದವರೆಗೆ ವೇತನಾನುದಾನಕ್ಕೆ ಒಳಪಡಿಸಲಾಗಿದೆ ;

(ಆ) ೧೯೯೫ರ ನಂತರ ಪ್ರಾರಂಭವಾದ ಖಾಸಗಿ ಕನ್ನಡ ಮಾಧ್ಯಮದ ಪ್ರಾಥಮಿಕ ಮತ್ತು ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ;

(ಇ) ಈ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಮಾಹಿತಿ ಸಿಂಧು (ಕಂಪ್ಯೂಟರ್ ಶಿಕ್ಷಣ) ಶಿಕ್ಷಣದ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೫೪೩ (೬೮೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಎಷ್ಟು ವರ್ಷಗಳ ಕಾಲ ಮಾಹಿತಿ ಸಿಂಧು ಶಿಕ್ಷಕರು (ಕಂಪ್ಯೂಟರ್ ಶಿಕ್ಷಣ) ಕೆಲಸ ನಿರ್ವಹಿಸಿದ್ದಾರೆ ; ಮತ್ತು ಎಷ್ಟು ಜನ ನಿರ್ವಹಿಸುತ್ತಿದ್ದಾರೆ ;

(ಆ) ಈ ಮಾಹಿತಿ ಸಿಂಧು ಕಂಪ್ಯೂಟರ್ ಶಿಕ್ಷಣವನ್ನು ಸ್ಥಗಿತಗೊಳಿಸಿದ್ದು ಯಾವಾಗ ;

(ಇ) ಪ್ರತಿಯೊಬ್ಬ ವಿದ್ಯಾರ್ಥಿಗೂ ಕಂಪ್ಯೂಟರ್ ಶಿಕ್ಷಣದ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಪ್ರತಿಯೊಂದು ಶಾಲೆಗಳಲ್ಲಿ ಕಂಪ್ಯೂಟರ್ ಶಿಕ್ಷಣ ಹಾಗೂ ಕಂಪ್ಯೂಟರ್ ಶಿಕ್ಷಕರನ್ನು ಕಡ್ಡಾಯವಾಗಿ ನೇಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಬೆಣ್ಣೆತೋರೆ ನೀರಾವರಿ ಯೋಜನೆ ಬಗ್ಗೆ

**ಶ್ರೀ ತಿಪ್ಪಣ್ಣ ಕಮಕನೂರ (ನಾಮನಿರ್ದೇಶನ ಹೊಂದಿದವರು) :–**

೫೪೪ (೪೮೩) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯ ಚಿತ್ತಾಪುರ ತಾಲ್ಲೂಕಿನ ಬೆಣ್ಣೆತೋರೆ ನೀರಾವರಿ ಯೋಜನೆ ಯಾವಾಗ ಪ್ರಾರಂಭಿಸಲಾಗಿದೆ ; ಯೋಜನೆಯ ಅಂದಾಜು ಮೊತ್ತವೆಷ್ಟು ; ಯೋಜನೆಗೆ ಖರ್ಚಾಗಿರುವ ಅನುದಾನ ಹಾಗೂ ಪೂರ್ಣಗೊಳಿಸಲು ಬೇಕಾಗಿರುವ ಅನುದಾನ ಎಷ್ಟು ;

(ಆ) ಈ ಯೋಜನೆ ಪೂರ್ಣಗೊಂಡಾಗ ಎಷ್ಟು ಎಕರೆ ಪ್ರದೇಶಕ್ಕೆ ನೀರಾವಾರಿ ಸೌಲಭ್ಯ ದೊರೆಯಲಿದೆ ; ಪ್ರಸ್ತುತ ಎಷ್ಟು ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಒದಗಿಸಲಾಗಿದೆ ;

(ಇ) ಈ ಯೋಜನೆಯ ಕಾಲುವೆ ಆಧುನೀಕರಣಕ್ಕೆ ಮಂಜೂರಾಗಿರುವ ಅನುದಾನ ಎಷ್ಟು ; ವೆಚ್ಚವಾಗಿರುವ ಅನುದಾನ ಎಷ್ಟು ;

(ಈ) ಈ ಯೋಜನೆಯನ್ನು ಯಾವ ವರ್ಷ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ ? (ವಿವರ ನೀಡುವುದು)

## ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವವರಿಗೆ ಸೇವಾ ಭದ್ರತೆ ಒದಗಿಸುವ ಬಗ್ಗೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :–**

೫೪೫ (೪೯೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ವಿಕಾಸ ಸೌಧದಲ್ಲಿರುವ ಸರ್ಕಾರಿ ಮುದ್ರಣಾಲಯದ ಘಟಕದಲ್ಲಿ ಕಳೆದ ೨೦ ಕ್ಕೂ ಹೆಚ್ಚು ವರ್ಷಗಳಿಂದ ಗುತ್ತಿಗೆ/ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಡಿಟಿಪಿ ಆಪರೇಟರ್‌ಗಳ ವಿವರ ಒದಗಿಸುವುದು ;

(ಆ) ಕೇವಲ ಬೆರಳಣಿಕೆಯಷ್ಟು ಇರುವ ಸದರಿ ನೌಕರರು ಸರ್ಕಾರಿ ಸೇವೆಗೆ ಸೇರುವ ವಯೋಮಿತಿ ಮೀರಿದ್ದು ; ಯಾವುದೇ ಸೇವಾ ಭದ್ರತೆ ಇಲ್ಲದೆ ಸಂದಿಗ್ಧ ಪರಿಸ್ಥಿತಿಯಲ್ಲಿರುವ ಇವರಿಗೆ ಸೇವಾ ಭದ್ರತೆ ಒದಗಿಸುವ ಬಗ್ಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಇ) ಇವರಿಗೆ ಸೇವಾ ಭದ್ರತೆ ಮತ್ತು ಸೂಕ್ತ ವೇತನವನ್ನು ಯಾವ ಕಾಲಮಿತಿಯೊಳಗೆ ಒದಗಿಸಲಾಗುವುದು ?

## ಸಣ್ಣ ನೀರಾವರಿ ಇಲಾಖೆಗೆ ೩ ವರ್ಷಗಳಿಂದ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬಂದ ಅನುದಾನದ ಬಗ್ಗೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) :–**

೫೪೬ (೫೧೨) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಸಣ್ಣ ನೀರಾವರಿ ಇಲಾಖೆಗೆ ಕಳೆದ ೩ ವರ್ಷಗಳಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು ; (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಅನುದಾನದಲ್ಲಿ ಕಲಬುರಗಿ ಜಿಲ್ಲೆಗೆ ಯಾವ ಯಾವ ಯೋಜನೆಗಳಡಿ ಯಾವ ಯಾವ ಲೆಕ್ಕ ಶೀರ್ಷಿಕೆಯಡಿಯಲ್ಲಿ ಅನುದಾನ ಹಂಚಿಕೆ ಮಾಡಿ ಖರ್ಚು ಮಾಡಲಾಗಿದೆ ; (ಯೋಜನಾವಾರು, ಲೆಕ್ಕಶೀರ್ಷಿಕೆವಾರು, ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಕಲಬುರಗಿ ಜಿಲ್ಲೆಗೆ ಯಾವ ಯಾವ ಯೋಜನೆಯಡಿಯಲ್ಲಿ ಅನುದಾನ ಬಿಡುಗಡೆ ಮಾಡಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದ ಮೂರು ವರ್ಷಗಳ ಕುಡಿಯುವ ನೀರಿನ ಸರಬರಾಜು ಮತ್ತು ಕಾಮಗಾರಿಗಳ ಪೂರ್ಣ ಮಾಹಿತಿ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) :–**

೫೪೭ (೫೦೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಯಡಿಯಲ್ಲಿ ಕೈಗೊಂಡಿರುವ ಕಾಮಗಾರಿಗಳಾವುವು ; (ವರ್ಷವಾರು, ಯೋಜನಾವಾರು ಮಾಹಿತಿ ನೀಡುವುದು)

(ಆ) ರಾಜ್ಯದ ಯಾವ ಯಾವ ತಾಲ್ಲೂಕುಗಳಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ ; ಈ ಯೋಜನೆಗೆ ತಾಲ್ಲೂಕುಗಳನ್ನು ಆಯ್ಕೆ ಮಾಡಲು ಅನುಸರಿಸಲಾಗುತ್ತಿರುವ ನಿಯಮಗಳಾವುವು ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳ ಯಾವ ಯಾವ ತಾಲ್ಲೂಕಿನ ಕಾಮಗಾರಿಗಳು ಪೂರ್ಣಗೊಂಡಿವೆ ; ಪ್ರಗತಿಯಲ್ಲಿರುವ ಕಾಮಗಾರಿಗಳ ತಾಲ್ಲೂಕುಗಳಾವುವು ; ಕಾಮಗಾರಿಗಳನ್ನು ಪ್ರಾರಂಭಿಸದೆ ಇರುವ ತಾಲ್ಲೂಕುಗಳ ಮಾಹಿತಿಯನ್ನು ಪ್ರತ್ಯೇಕವಾಗಿ ನೀಡುವುದು ?

## ರಾಜ್ಯದಲ್ಲಿರುವ ಗ್ರಾಮ ಪಂಚಾಯಿತಿ ಲೆಕ್ಕಪರಿಶೋಧನೆ ಬಾಕಿ ಇರುವ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೮ (೬೮೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ೬೦೨೨ ಗ್ರಾಮ ಪಂಚಾಯತಿಗಳಲ್ಲಿ ಎಷ್ಟು ವರ್ಷಗಳಿಂದ ಲೆಕ್ಕಪರಿಶೋಧನೆ ಬಾಕಿ ಉಳಿದಿದೆ ; (ಪಂಚಾಯತ್‌ವಾರು–ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಲೆಕ್ಕಪರಿಶೋಧನಾ ವರದಿಯಂತೆ ಗ್ರಾಮ ಪಂಚಾಯತಿಗಳಲ್ಲಿನ ಒಟ್ಟಾರೆ ಆಡಿಟ್ ಆಕ್ಷೇಪಣಾ ಮೊತ್ತ ಮತ್ತು ವಸೂಲಾತಿಗೆ ಬಾಕಿ ಮೊತ್ತ ಎಷ್ಟು ; (ಗ್ರಾಮ ಪಂಚಾಯತಿವಾರು, ತಾಲ್ಲೂಕು ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದ ಎಷ್ಟು ಗ್ರಾಮ ಪಂಚಾಯತ್‌ಗಳಲ್ಲಿ ಕ್ಯಾಷ್–ಇನ್–ಹ್ಯಾಂಡ್ ಪ್ರಕರಣಗಳಿವೆ ; ಒಟ್ಟು ಮೊತ್ತ ಕ್ಯಾಷ್–ಇನ್–ಹ್ಯಾಂಡ್ ಇದೆ ; ಕಾರಣೀಕರ್ತರಾದ ಅಧಿಕಾರಿ–ನೌಕರರು ಯಾರು ;

(ಈ) ಗ್ರಾಮ ಪಂಚಾಯತ್‌ಗಳ ನಿಧಿಗಳಿಗೆ ಸಂಬಂಧಿಸಿದಂತಿರುವ ವಸೂಲಾತಿ ಮೊತ್ತ, ಕ್ಯಾಷ್ ಇನ್ ಹ್ಯಾಂಡ್ ಮತ್ತು ಹಣ

ದುರುಪಯೋಗಕ್ಕೆ ಸಂಬಂಧಿಸಿದಂತೆ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ತಾಲ್ಲೂಕು ಕಾರ್ಯ ನಿರ್ವಾಹಣ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಸಿಇಓ ಗಳು ವಿಫಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಗ್ರಾಮ ಪಂಚಾಯತ್‌ಗಳಲ್ಲಿ ವಸೂಲಾತಿ ಮೊತ್ತದ ಹಣ ದುರುಪಯೋಗ ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಊ) ಗ್ರಾಮ ಪಂಚಾಯತ್‌ಗಳಲ್ಲಿ ಲೆಕ್ಕಪತ್ರ ಮತ್ತು ಹಣಕಾಸು ಶಿಸ್ತು ತರಲು ಪ್ರತಿ ಗ್ರಾಮ ಪಂಚಯತ್‌ಗಳಿಗೆ ಲೆಕ್ಕ ಸಹಾಯಕರನ್ನು ನಿಯೋಜಿಸುವ ಕುರಿತು ಸರ್ಕಾರದ ನಿಲುವೇನು ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕೈಗೊಂಡ ಕಾರ್ಯಕ್ರಮಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೪೯ (೫೧೪) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ;

(ಆ) ಇದಕ್ಕೆ ಬಂದಿರುವ ಅನುದಾನ ಹಾಗೂ ಕಾರ್ಯಕ್ರಮ ಮಾಡಿರುವ ಸಂಘ ಸಂಸ್ಥೆಗಳ ವಿವರ ನೀಡುವುದು ;

(ಇ) ಸದರಿ ಇಲಾಖೆಯಿಂದ ನಡೆಸುವ ಕಾರ್ಯಕ್ರಮಗಳಿಗೆ ಇರುವ ಮಾನದಂಡವೇನು ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ಆರೋಗ್ಯ ಕೇಂದ್ರಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೫೦ (೫೧೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ ; (ವಿವರ ನೀಡುವುದು)

(ಆ) ಈ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಈ ಮೇಲ್ಕಂಡ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಸರ್ಕಾರವು ಕಳೆದ ೪ ವರ್ಷಗಳಲ್ಲಿ ನೀಡಿದ ಅನುದಾನ ಎಷ್ಟು ; ನೀಡಿರುವ ಅನುದಾನವನ್ನು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳಲಾಗಿದೆಯೇ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ಶುದ್ಧ ಕುಡಿಯುವ ನೀರಿನ ಘಟಕಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೫೧ (೬೮೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಇದುವರೆವಿಗೂ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ ; ಮತ್ತು ಅದಕ್ಕೆ ತಗಲಿದ ಹಣವೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಮೇಲ್ಕಂಡ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶುದ್ಧ ನೀರಿನ ಘಟಕಗಳ ಸಂಖ್ಯೆ ಎಷ್ಟು ಮತ್ತು ಸ್ಥಗಿತಗೊಂಡಿರುವ ಘಟಕಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ಸುವರ್ಣಗ್ರಾಮ ಯೋಜನೆಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೫೨ (೬೮೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಲ್ಲಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಸುವರ್ಣ ಗ್ರಾಮ ಯೋಜನೆಯಡಿ ಎಷ್ಟು ಗ್ರಾಮಗಳನ್ನು ಅಭಿವೃದ್ಧಿಪಡಿಸಲಾಗಿದೆ ; (ಗ್ರಾಮ ಪಂಚಾಯಿತಿವಾರು ಸಂಕ್ಷಿಪ್ತ ವಿವರ ನೀಡುವುದು)

(ಆ) ಮೇಲ್ಕಂಡ ಜಿಲ್ಲೆಗಳಲ್ಲಿ ಸುವರ್ಣ ಗ್ರಾಮ ಯೋಜನೆಯಡಿ ವೆಚ್ಚ ಮಾಡಲಾದ ಹಣ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಸುವರ್ಣ ಗ್ರಾಮ ಯೋಜನೆಯಡಿ ಆಯ್ಕೆ ಮಾಡಲಾದ ಗ್ರಾಮಗಳನ್ನು ಸಂಪೂರ್ಣವಾಗಿ ಅಭಿವೃದ್ಧಿ ಮಾಡಲಾಗಿದೆಯೇ? (ವಿವರ ನೀಡುವುದು)

## ಸರ್ಕಾರಿ ಶಾಲಾ ಕಟ್ಟಡಗಳ ಕುರಿತು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೫೩ (೫೬೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯಲ್ಲಿರುವ ಸರ್ಕಾರಿ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು ;

(ಆ) ಈ ಶಾಲೆಗಳಿಗೆ ತರಗತಿವಾರು ಶಾಲಾ ಕೊಠಡಿಗಳು ಇವೆಯೇ ; ಇದ್ದಲ್ಲಿ, ಕೊಠಡಿಗಳ ಸಂಖ್ಯೆ ಎಷ್ಟು ;

(ಇ) ಈ ಪೈಕಿ ಸುಸ್ಥಿತಿಯಲ್ಲಿರುವ ಕೊಠಡಿಗಳ ಸಂಖ್ಯೆ ಎಷ್ಟು ; ಹಾಗೂ ಶಿಥಿಲಾವಸ್ಥೆಯಲ್ಲಿರುವ/ದುರಸ್ಥಿಯಲ್ಲಿರುವ ಕೊಠಡಿಗಳ ಸಂಖ್ಯೆ ಎಷ್ಟು ;

(ಈ) ದುರಸ್ಥಿಯಲ್ಲಿರುವ ಕೊಠಡಿಗಳ ಸುಧಾರಣೆ ಮಾಡಲು ಸರ್ಕಾರವು ಕೈಗೊಂಡ ಕ್ರಮವೇನು ; ಕ್ರಮ ಕೈಗೊಂಡಿದ್ದಲ್ಲಿ ಇದಕ್ಕೆ ಬಿಡುಗಡೆಯಾದ ಅನುದಾನವೆಷ್ಟು ; ಮತ್ತು ಯಾವ ಹಂತದಲ್ಲಿದೆ;

(ಉ) ಶಿಥಿಲಾವಸ್ಥೆಯಲ್ಲಿರುವ ಕಟ್ಟಡಗಳನ್ನು ತೆರವುಗೊಳಿಸಿ, ಹೊಸ ಕಟ್ಟಡ/ಕೊಠಡಿ ನಿರ್ಮಾಣ ಮಾಡಲು ಸರ್ಕಾರವು ಕ್ರಮ ಕೈಗೊಂಡಿದೆಯೇ ; ಕೈಗೊಂಡಿದ್ದಲ್ಲಿ, ತಾಲ್ಲೂಕುವಾರು ಮಾಹಿತಿ ನೀಡುವುದು ?

## ಶಿಥಿಲಾವಸ್ಥೆಯಲ್ಲಿರುವ ಓವರ್‌ಹೆಡ್ ನೀರಿನ ಟ್ಯಾಂಕ್‌ಗಳ ಕುರಿತು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೫೪ (೫೨೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ನಿಪ್ಪಾಣಿ ತಾಲ್ಲೂಕಿನ ಶಿರಗುಪ್ಪಿ ಗ್ರಾಮದ ಶಾಲಾ ಆವರಣದಲ್ಲಿರುವ ಓವರ್‌ಹೆಡ್ ನೀರಿನ ಟ್ಯಾಂಕ್ ಶಿಥಿಲಾವಸ್ಥೆ ತಲುಪಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಯಾವುದೇ ಅಹಿತಕರ ಘಟನೆ ನಡೆಯುವ ಮುಂಚೆಯೇ ಸದರಿ ಟ್ಯಾಂಕ್‌ನ್ನು ತೆರವುಗೊಳಿಸಿ, ಬೇರೆಡೆ ಓವರ್‌ಹೆಡ್ ಟ್ಯಾಂಕ್ ನಿರ್ಮಿಸಲು ಸಂಬಂಧಪಟ್ಟ ಇಲಾಖೆಯು ಕ್ರಮ ವಹಿಸುವುದೇ ?

# ಸ್ವಚ್ಛಭಾರತ ಮಿಷನ್ ಯೋಜನೆಯಡಿಯ ಶೌಚಾಲಯಗಳ ಬಿಲ್ಲು ಪಾವತಿ ಕುರಿತು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೫೫ (೫೬೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ ಮತ್ತು ೨೦೧೮–೧೯ನೇ ಸಾಲಿನಲ್ಲಿ ಸ್ವಚ್ಛಭಾರತ ಮಿಷನ್ ಅಡಿ ಬೆಳಗಾವಿ ಜಿಲ್ಲೆಯಲ್ಲಿ ಈವರೆಗೆ ಎಷ್ಟು ಶೌಚಾಲಯ ನಿರ್ಮಾಣ ಮಾಡಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸದರಿ ಯೋಜನೆಯಡಿ ಶೌಚಾಲಯ ನಿರ್ಮಾಣ ಮಾಡಿಕೊಂಡ ಫಲಾನುಭವಿಗಳಿಗೆ ಪೂರ್ಣ ಪ್ರಮಾಣದ ಬಿಲ್ಲು ಸಂದಾಯ ಮಾಡಲಾಗಿದೆಯೇ ;

(ಇ) ಈವರೆಗೆ ಪೂರ್ಣ ಬಿಲ್ಲು ಸಂದಾಯ ಮಾಡಿದ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಈ) ಬಿಲ್ಲು ಸಂದಾಯ ಮಾಡದೆ ಬಾಕಿ ಉಳಿದ ಫಲಾನುಭವಿಗಳ ಸಂಖ್ಯೆ ಎಷ್ಟು ; ಬಿಲ್ಲು ಬಾಕಿ ಉಳಿಯಲು ಕಾರಣವೇನು ; ಈ ಫಲಾನುಭವಿಗಳಿಗೆ ಕೂಡಲೇ ಬಿಲ್ಲು ಸಂದಾಯ ಮಾಡಲಾಗುವುದೇ? (ವಿವರ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 098/300 ಪ್ರತಿಗಳು/17–07–2019